ವಿಜಯಪುರ | ಸಂಪುಟ 04 | ಸಂಚಿಕೆ 162 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಬುಧವಾರ, ಆಗಸ್ಟ್, 19, 2026



"ವಂದೇ ಮಾತರಂ ಹಾಡುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಸೋನಿಯಾ ಗಾಂಧಿಯಿಂದ ಇನ್ನೇನು ನಿರೀಕ್ಷಿಸಲು ಸಾಧ್ಯ? ಅವರೇನು ನಮ್ಮ ದೇಶದವರೇ? ಮದುವೆಯ ನಂತರ ಅವರು ಭಾರತಕ್ಕೆ ಬಂದವರು. ಅವರ ನರಗಳಲ್ಲಿ ಹರಿಯುತ್ತಿರುವುದು ಭಾರತೀಯ ರಕ್ತವಲ್ಲ, ಇಟಲಿ ರಕ್ತ ಅಲ್ಲವೇ?"

■ ಎಚ್.ಡಿ.ಕುಮಾರಸ್ವಾಮಿ
ಕೇಂದ್ರ ಸಚಿವರು

## ಗ್ರಂಥಾಲಯಗಳು ಜನಸಾಮಾನ್ಯರ ವಿಶ್ವವಿದ್ಯಾಲಯಗಳು

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮಹಾನಗರ ವ್ಯಾಪ್ತಿಯ ಪ್ರತಿ ವಾರ್ಡನಲ್ಲಿ ಸಂಬಂಧಿಸಿದ ಪ್ರಾಧಿಕಾರದ ವತಿಯಿಂದ ಗ್ರಂಥಾಲಯ ಕಟ್ಟಡ ಕಟ್ಟಲಿಕ್ಕೆ ಬೇಕಾಗಿರುವ ನಿವೇಶನ ಪಡೆದು ಸುಸಜ್ಜಿತ ಗ್ರಂಥಾಲಯ ಕಟ್ಟಡ ನಿರ್ಮಿಸಲು ಕ್ರಮ ಕೈಗೊಳ್ಳಬೇಕು ಎಂದು ನಗರ ಗ್ರಂಥಾಲಯ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರಾದ ಎಂ.ಎಸ್. ಕರಡಿ ಅವರು ಹೇಳಿದರು.

ನಗರ ಕೇಂದ್ರ ಗ್ರಂಥಾಲಯದ ಉಪನಿರ್ದೇಶಕರ ಕಚೇರಿಯಲ್ಲಿ ಮಂಗಳವಾರ ನಡೆದ ನಗರ ಗ್ರಂಥಾಲಯ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರ ಕೇಂದ್ರ ಗ್ರಂಥಾಲಯ ಆವರಣದಲ್ಲಿ ಲಭ್ಯವಿರುವ ಖುಲ್ಲಾ ನಿವೇಶನದಲ್ಲಿ ಲೋಕಸಭಾ ಸದಸ್ಯರ ಮತ್ತು ವಿಧಾನ ಸಭೆ ಸದಸ್ಯರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಅನುದಾನದಲ್ಲಿ ಗ್ರಂಥಾಲಯ ಕಟ್ಟಡ ಕಟ್ಟಲು ನೀಲನಕ್ಷೆ ಹಾಗೂ ಅಂದಾಜು ಪತ್ರಿಕೆ ತಯಾರಿಸಬೇಕು ಎಂದೂ ಸೂಚಿಸಿದರು. ಗ್ರಂಥಾಲಯಗಳು ಜನ ಸಾಮಾನ್ಯರ ವಿಶ್ವವಿದ್ಯಾಲಯಗಳಿದ್ದಂತೆ. ನಗರದ ಪ್ರತಿಯೊಬ್ಬ ನಾಗರಿಕನಿಗೂ ಕೂಡ ಗ್ರಂಥಾಲಯ ಸೇವೆ ಪಡೆಯಲು ಪ್ರೇರೆಪಿಸಿ ಪ್ರತಿ ಬಡಾವಣೆಯ ಉದ್ಯಾನವನದಲ್ಲಿ ಗ್ರಂಥಾಲಯವನ್ನು ತೆರೆಯುವಂತೆ ಮಹಾಪೌರರು ಸಲಹೆ ನೀಡಿದರು.

ಬದಲಾಗುತ್ತಿರುವ ಮಾಹಿತಿ ಹಾಗೂ ಸ್ವರೂಪಕ್ಕೆ ಸಂಬಂಧಪಟ್ಟಂತೆ ಪುಸ್ತಕ ಓದುವ ಸಂಸ್ಕೃತಿ ಬೆಳೆಸಲು ಅನುಕೂಲವಾಗುವಂತೆ, ಪ್ರಾಥಮಿಕ ಶಾಲೆಯಿಂದ ಕಾಲೇಜು ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕ ಓದುಗರಿಗೆ ಗ್ರಂಥಾಲಯದಲ್ಲಿ ಸ್ಪರ್ಧಾತ್ಮಕ, ವಿಷಯಾಧಾರಿತ ಪಠ್ಯ, ವಾಣಿಜ್ಯ, ಕಲೆ, ಸಾಹಿತ್ಯ ,ಇತಿಹಾಸ ಮತ್ತು ಮಕ್ಕಳ ವ್ಯಕ್ತಿತ್ವ ವಿಕಸನದ ಹಾಗೂ ಪ್ರಚಲಿತ ವಿದ್ಯಮಾನದ ಬಗ್ಗೆ ಆಯಾ ಶಾಖಾ ಗ್ರಂಥಾಲಯಗಳಲ್ಲಿ ಲಭ್ಯವಿರುವ ಪುಸ್ತಕಗಳ ಬಗ್ಗೆ ಆಸಕ್ತಿ ಮೂಡಿಸಲು ಸ್ಪರ್ಧಾತ್ಮಕ ಪುಸ್ತಕಗಳ ಪ್ರದರ್ಶನ ಏರ್ಪಡಿಸುವ ಮೂಲಕ ಯುವಜನತೆಯನ್ನು ಗ್ರಂಥಾಲಯಗಳೆಡೆಗೆ ಆಕರ್ಷಿಸಬೇಕು. ಆ ಮೂಲಕ ಅವರಲ್ಲಿ ಓದುವ ಹವ್ಯಾಸ ಹೆಚ್ಚಿಸಬೇಕು ಎಂದರು.



**ವಿಜಯಪುರ ನಗರ ಗ್ರಂಥಾಲಯ ಪ್ರಾಧಿಕಾರದ ಸಭೆಯಲ್ಲಿ ನಗರ ಗ್ರಂಥಾಲಯ ಪ್ರಾಧಿಕಾರದ ಅಧ್ಯಕ್ಷ ಕರಡಿ ಸಲಹೆ**

ಗ್ರಂಥಾಲಯಗಳ ಮಹತ್ವದ ಬಗ್ಗೆ ವಿಚಾರ ಸಂಕೀರ್ಣ, ಉಪನ್ಯಾಸಗಳು, ವಿಶೇಷ ವಿಚಾರಗೋಷ್ಠಿ ಕಾರ್ಯಗಾರ ಏರ್ಪಡಿಸಿ ಗ್ರಂಥಾಲಯದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳಬೇಕು ಎಂದರು.

ಸಭೆಯಲ್ಲಿ ನಗರ ಗ್ರಂಥಾಲಯ ಪ್ರಾಧಿಕಾರದ ಸದಸ್ಯರಾದ ಎಸ್.ಎಸ್. ಕನ್ನೂರ, ಡಾ. ಶಿವಗಂಗಾ, ಅಪ್ಪಾಸಾಹೇಬ ದಳವಾಯಿ ಹಾಗೂ ಶೈಲಜಾ ಆರ್ ಹಾಲಾವರ, ನಗರ ಗ್ರಂಥಾಲಯ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಉಪನಿರ್ದೇಶಕರಾದ ಅಜಯಕುಮಾರ ಮತ್ತಿತರರು ಪಾಲ್ಗೊಂಡಿದ್ದರು.

## ಶಿವಶಂಕರಪ್ಪ ಮರುನೇಮಕಕ್ಕೆ ಹೈಕೋರ್ಟ್ ಸೂಚನೆ

ಬೆಂಗಳೂರು: ಪಶುವೈದ್ಯಕೀಯ ನೇಮಕಾತಿಯಲ್ಲಿ ಅಕ್ರಮ ಹಾಗೂ ಲಂಚ ಪಡೆದ ಆರೋಪಕ್ಕೆ ಸಂಬಂಧಿಸಿದಂತೆ ಕರ್ನಾಟಕ ಲೋಕಸೇವಾ ಆಯೋಗ (ಏಕಖಅ) ಅಧ್ಯಕ್ಷ ಸ್ಥಾನದಿಂದ ಶಿವಶಂಕರಪ್ಪ ಸಾಹುಕಾರ್ ಅವರನ್ನು ಅಮಾನತುಗೊಳಿಸಿದ್ದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರ ಆದೇಶವನ್ನು ಕರ್ನಾಟಕ ಹೈಕೋರ್ಟ್ ರದ್ದು ಮಾಡಿದೆ. ಅಲ್ಲದೆ ಕೆಪಿಎಸ್ ಸಿ ಅಧ್ಯಕ್ಷ ಸ್ಥಾನಕ್ಕೆ ಶಿವಶಂಕರಪ್ಪ ಸಾಹುಕಾರ್ ಅವರನ್ನು ಮರುನೇಮಕಗೊಳಿಸುವಂತೆ ಸೂಚನೆ ನೀಡಿದೆ.


ಏಕಖಅ ಅಧ್ಯಕ್ಷರಾಗಿದ್ದ ಶಿವಶಂಕರಪ್ಪ ಸಾಹುಕಾರ್ ಅವರನ್ನು ಜುಲೈ 10ರಂದು ರಾಜ್ಯಪಾಲರು ಅಮಾನತು ಮಾಡಿದ್ದರು. ಈ ಸಂಬಂಧ ಶಿವಶಂಕರಪ್ಪ ಸಾಹುಕಾರ್ ಹೈಕೋರ್ಟ್ ಮೆಟ್ಟಿಲೇರಿದ್ದರು. ಈ ಕುರಿತ ಅರ್ಜಿಯ ವಿಚಾರಣೆ ನಡೆಸಿದ ನ್ಯಾ.ಸೂರಜ್ ಗೋವಿಂದರಾವ್ ಅವರಿದ್ದ ಹೈಕೋರ್ಟ್ ಪೀಠ ಮಹತ್ವದ ತೀರ್ಪು ನೀಡಿದೆ.

ಶಿವಶಂಕರಪ್ಪ ಅವರನ್ನು ಅಮಾನತುಗೊಳಿಸುವಂತೆ ಸಚಿವ ಸಂಪುಟ ಸಲಹೆ ಅಥವಾ ಶಿಫಾರಸು ಮಾಡಿಲ್ಲ. ರಾಜ್ಯಪಾಲರು ಸಚಿವ ಸಂಪುಟದ ತೀರ್ಮಾನವನ್ನಷ್ಟೇ ಅನುಸರಿಸಬೇಕು ಎಂದು ಕೋರ್ಟ್ ಹೇಳಿದ್ದು, 7 ದಿನಗಳಲ್ಲಿ ಕೆಪಿಎಸ್ ಸಿ ಅಧ್ಯಕ್ಷರನ್ನಾಗಿ ಶಿವಶಂಕರಪ್ಪ ಸಾಹುಕಾರ್ ಅವರನ್ನು ಮರುನೇಮಕ ಮಾಡುವಂತೆ ಸೂಚಿಸಿದೆ.

ತಮ್ಮ ಇಬ್ಬರು ಪುತ್ರಿಯರು ಕೈಗಾರಿಕಾ ವಿಸ್ತರಣಾಧಿಕಾರಿಯಾಗಿ ನೇಮಕವಾಗಲು ಸಹಕರಿಸಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ಶಿವಶಂಕರಪ್ಪ ಸಾಹುಕಾರ್ ಅವರನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಅಮಾನಾತುಗೊಳಿಸಿದ್ದಾರೆ.



**ಕೆಪಿಸಿಸಿ ಅಧ್ಯಕ್ಷರನ್ನಾಗಿ ಶಿವಶಂಕರಪ್ಪ ಮರುನೇಮಕಕ್ಕೆ ಹೈಕೋರ್ಟ್ ಸೂಚನೆ । ರಾಜ್ಯಪಾಲರು ಹೊರಡಿಸಿದ್ದ ಅಮಾನತು ಆದೇಶ ರದ್ದು**




### ಇಡಿ ಅಧಿಕಾರಿಗಳಿಂದ ದಾಳಿ

ಬೆಂಗಳೂರು: ಪಶುವೈದ್ಯಾಧಿಕಾರಿಗಳ ಹುದ್ದೆಗಳ ನೇಮಕಾತಿಯಲ್ಲಿ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಲೋಕಸೇವಾ ಆಯೋಗ(ಕೆಪಿಎಸ್ ಸಿ) ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರ ಮನೆ ಹಾಗೂ ಕಚೇರಿ ಸೇರಿದಂತೆ 21ಕ್ಕೂ ಹೆಚ್ಚು ಸ್ಥಳಗಳಲ್ಲಿ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಮಂಗಳವಾರ ದಾಳಿ ನಡೆಸಿದ್ದಾರೆ.

ಪಶುವೈದ್ಯಾಧಿಕಾರಿ ನೇಮಕಾತಿಯಲ್ಲಿ ಕೋಟ್ಯಂತರ ಅವ್ಯವಹಾರ ನಡೆದಿದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಇಡಿ ಅಧಿಕಾರಿಗಳು ಬೆಂಗಳೂರಿನ ಡಾಲರ್ಸ್ ಕಾಲೋನಿಯಲ್ಲಿರುವ ಅವರ ಮನೆ ಮತ್ತು ಕಲಬುರಗಿ ಜಿಲ್ಲೆ ಆಳಂದ ನಿವಾಸದ ಮೇಲೂ ದಾಳಿ ನಡೆಸಿದ್ದಾರೆ.



## ವಿಜಯಪುರ ಜಿಲ್ಲೆಗೆ 371(ಜೆ) ಮೀಸಲಾತಿ ಪ್ರಸ್ತಾವನೆ ಕಳಿಸಲು ಒತ್ತಾಯ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ವಿಜಯಪುರ ಜಿಲ್ಲೆಯನ್ನು ಸಂವಿಧಾನದ 371(ಜೆ) ವಿಧಿಯ ಮೀಸಲಾತಿಗೆ ಸೇರ್ಪಡೆಗೊಳಿಸಲು ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರದಿಂದ ಪ್ರಸ್ತಾವನೆ ಕಳುಹಿಸುವಂತೆ ಆಗ್ರಹಿಸಿ ವಿಜಯಪುರ ಜಿಲ್ಲಾ 371(ಜೆ) ಹೋರಾಟ ಸಮಿತಿ ಮುಖಂಡರು ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ ಅವರಿಗೆ ಮನವಿ ಸಲ್ಲಿಸಿದರು.

ಸಂವಿಧಾನದ 371(ಜೆ) ವಿಧಿಗೆ ತಿದ್ದುಪಡಿ ತಂದು ವಿಜಯಪುರ ಜಿಲ್ಲೆಯನ್ನು ಮೀಸಲಾತಿ ವ್ಯಾಪ್ತಿಗೆ ಸೇರ್ಪಡೆಗೊಳಿಸುವ ಕುರಿತು ಮುಖ್ಯಮಂತ್ರಿ ಅವರ ಮನವೊಲಿಸಿ, ರಾಜ್ಯ ಸರ್ಕಾರದ ಮೂಲಕ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಿಕೊಡಬೇಕು ಎಂದು ಹೋರಾಟ ಸಮಿತಿ ಮುಖಂಡರು ಒತ್ತಾಯಿಸಿದರು.

ಜಿಲ್ಲೆ 371(ಜೆ) ವ್ಯಾಪ್ತಿಗೆ ಸೇರ್ಪಡೆಯಾಗುವವರೆಗೆ ತಾತ್ಕಾಲಿಕವಾಗಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಸೌಲಭ್ಯಗಳನ್ನು ವಿಜಯಪುರ ಜಿಲ್ಲೆಗೂ ವಿಸ್ತರಿಸಬೇಕು ಎಂದು ಆಗ್ರಹಿಸಿದರು. ಮನವಿ ಸ್ವೀಕರಿಸಿದ ಶಾಸಕ ಯಶವಂತರಾಯಗೌಡ ಪಾಟೀಲ ಅವರು ಹೋರಾಟ ಸಮಿತಿಯ ಬೇಡಿಕೆಗೆ ಸಕಾರಾತ್ಮಕವಾಗಿ ಸ್ಪಂದಿಸಿ, ವಿಜಯಪುರ ಜಿಲ್ಲೆಗೆ 371(ಜೆ) ಮೀಸಲಾತಿ ದೊರಕಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ವಿಜಯಪುರ ಜಿಲ್ಲೆಯ ಸುಮಾರು 25 ಲಕ್ಷ ಜನರ, ವಿಶೇಷವಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಸೌಲಭ್ಯ, ಯುವಕರಿಗೆ ಉದ್ಯೋಗ ನೇಮಕಾತಿಯಲ್ಲಿ ಮೀಸಲಾತಿ ಹಾಗೂ ಕಲ್ಯಾಣ ಕರ್ನಾಟಕ ಭಾಗಕ್ಕೆ ದೊರೆಯುವ ವಿಶೇಷ ಅನುದಾನ ಮತ್ತು ಅಭಿವೃದ್ಧಿ ಸೌಲಭ್ಯಗಳ ದೃಷ್ಟಿಯಿಂದ 371(ಜೆ) ತಿದ್ದುಪಡಿ ಅತ್ಯಗತ್ಯವಾಗಿದೆ. ಜಿಲ್ಲೆಯ ಮಕ್ಕಳ ಭವಿಷ್ಯದ ಹಿತದೃಷ್ಟಿಯಿಂದ ಕೇಂದ್ರಕ್ಕೆ ತಿದ್ದುಪಡಿ ಪ್ರಸ್ತಾವನೆ ಕಳುಹಿಸಿ ನ್ಯಾಯ ಒದಗಿಸಬೇಕು ಎಂದು ಹೋರಾಟ ಸಮಿತಿ ಮುಖಂಡರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಹೋರಾಟಗಾರರಾದ ವಿನೋದ ಖೇಡ, ಲಾಯಪ್ಪ ಇಂಗಳೆ, ಚಂದ್ರಶೇಖರ ಹೊಸಮನಿ, ಮಲ್ಲನಗೌಡ ಬಿರಾದಾರ (ಬರಟಗಿ), ಸಂಜೀವ ಪಾಟೀಲ (ಕಣ್ಣೂರು) ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಇಂಡಿಯ ನಿವೃತ್ತ ಶಿಕ್ಷಕನ ಸಾವಿನ ಪ್ರಕರಣಕ್ಕೆ ಬಿಗ್ ಟ್ವಿಸ್ಟ್!

### ತಂದೆಯ ಸಾವಿನ ಹಿಂದೆ ಹಿರಿಯ ಪುತ್ರಿಯ ಕೈವಾಡದ ಶಂಕೆ । ಮೃತನ ಕಿರಿಯ ಪುತ್ರಿಯಿಂದ ದೂರು ದಾಖಲು । ಮೃತನ ಹಿರಿಯ ಪುತ್ರಿ ಹಾಗೂ ಆಕೆಯ ಪರಿಚಿತ ವ್ಯಕ್ತಿ ಪೊಲೀಸರು ವಶಕ್ಕೆ

■ ಉದಯರಶ್ಮಿ ದಿನಪತ್ರಿಕೆ

■ ವಿಶೇಷ ವರದಿ: ಶಂಕರ್ ಎಸ್ ಬಿ

ಇಂಡಿ: ಭಾನುವಾರ ಕೊಲೆಯಾದ ನಿವೃತ್ತ ಶಿಕ್ಷಕ ಸಿದ್ದಪ್ಪ ಬಸಪ್ಪ ಅಂಜುಟಗಿ (62) ಅವರ ಅನುಮಾನಾಸ್ಪದ ಸಾವಿನ ಪ್ರಕರಣ ಇದೀಗ ಮತ್ತಷ್ಟು ತಿರುವು ಪಡೆದುಕೊಂಡಿದೆ. ಮೃತನ ಹತ್ಯೆಯ ಹಿಂದೆ ಹಿರಿಯ ಪುತ್ರಿ ಪ್ರಿಯಾಂಕಾ ಅವರ ಕೈವಾಡವಿದೆಯೇ ಎಂಬ ಶಂಕೆ ವ್ಯಕ್ತವಾಗಿದ್ದು, ಈ ಹಿನ್ನೆಲೆಯಲ್ಲಿ ಪೊಲೀಸರು ತನಿಖೆ ಚುರುಕುಗೊಳಿಸಿದ್ದಾರೆ.



ಮೃತ ನಿವೃತ್ತ ಶಿಕ್ಷಕ

ಮೃತನ ಹಿರಿಯ ಪುತ್ರಿ ಪ್ರಿಯಾಂಕಾ (30) ಹಾಗೂ ಆಕೆಯೊಂದಿಗೆ ವೈಯಕ್ತಿಕ ಸಂಬಂಧ ಹೊಂದಿದ್ದರು ಎನ್ನಲಾಗಿರುವ ಸಂತೋಷ ಸಿಂಧೆ ಅವರನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

ಸಿದ್ದಪ್ಪ ಅಂಜುಟಗಿ ಅವರು ನಿವೃತ್ತ ಶಿಕ್ಷಕರಾಗಿದ್ದು, ಅವರ ಮೃತದೇಹ ಬೆಡ್‌ಶೀಟ್‌ನಲ್ಲಿ ಸುತ್ತಿದ ಸ್ಥಿತಿಯಲ್ಲಿ ರಸ್ತೆ ಬದಿಯಲ್ಲಿ ಪತ್ತೆಯಾಗಿತ್ತು. ತಲೆ ಹಾಗೂ ಎದೆ ಭಾಗಕ್ಕೆ ಬಲವಾದ ಹೊಡೆತ ಬಿದ್ದಿರುವ ಶಂಕೆ ವ್ಯಕ್ತವಾಗಿದ್ದು, ಪ್ರಕರಣವನ್ನು ಪೊಲೀಸರು ಗಂಭೀರವಾಗಿ ಪರಿಗಣಿಸಿದ್ದಾರೆ.

**ಕಿರಿಯ ಪುತ್ರಿಯಿಂದ ದೂರು**

ಮೃತ ಸಿದ್ದಪ್ಪ ಅವರ ಎರಡನೇ ಪುತ್ರಿ ನಿಖಿತಾ ಅವರು ಪೊಲೀಸರಿಗೆ ದೂರು ನೀಡಿದ್ದು, ದೂರಿನಲ್ಲಿರುವ ಅಂಶಗಳ ಆಧಾರದ ಮೇಲೆ ತನಿಖೆ ಮುಂದುವರಿದಿದೆ.

ಮೃತರ ಹಿರಿಯ ಪುತ್ರಿ ಪ್ರಿಯಾಂಕಾ ಅವರ ಪತಿ ಸುರೇಶ ಮಸಳಿ ಅವರು ಕೊರೊನಾ ಅವಧಿಯಲ್ಲಿ ಮೃತಪಟ್ಟಿದ್ದರು. ಬಳಿಕ ಪ್ರಿಯಾಂಕಾ ವಿಜಯಪುರದ ಸಂತೋಷ ಸಿಂಧೆ ಎಂಬ ವ್ಯಕ್ತಿಯೊಂದಿಗೆ ವೈಯಕ್ತಿಕ ಸಂಬಂಧ ಹೊಂದಿದ್ದರು ಎನ್ನಲಾಗಿದ್ದು, ಈ ಸಂಬಂಧಕ್ಕೆ ತಂದೆ ಸಿದ್ದಪ್ಪ ವಿರೋಧ ವ್ಯಕ್ತಪಡಿಸಿದ್ದರು ಎಂಬ ಮಾಹಿತಿ ಲಭ್ಯವಾಗಿದೆ.



ಸಂತೋಷ ಸಿಂಧೆ



ಮೃತನ ಹಿರಿಯ ಪುತ್ರಿ ಪ್ರಿಯಾಂಕಾ ಮಸಳಿ

ಇದೇ ವಿಚಾರವಾಗಿ ತಂದೆ-ಮಗಳ ನಡುವೆ ಮನಸ್ತಾಪ ಉಂಟಾಗಿತ್ತೇ ಎಂಬ ಬಗ್ಗೆಯೂ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಇನ್ನು ಸಿದ್ದಪ್ಪ ಅವರು ನಿವೃತ್ತರಾದ ಬಳಿಕ ದೊರೆತ ಹಣ ಹಾಗೂ ಕುಟುಂಬದ ಆರ್ಥಿಕ ವಿಚಾರಗಳ ಬಗ್ಗೆಯೂ ಮನೆಯಲ್ಲಿ ಭಿನ್ನಾಭಿಪ್ರಾಯವಿತ್ತು ಎನ್ನಲಾಗುತ್ತಿದೆ. ನಿವೃತ್ತಿ ಹಣದ ಬಳಕೆ ವಿಚಾರದಲ್ಲಿ ಕುಟುಂಬದೊಳಗೆ ಅಸಮಾಧಾನ ಇತ್ತೇ ಎಂಬ ಅಂಶವನ್ನೂ ಪೊಲೀಸರು ಪರಿಶೀಲಿಸುತ್ತಿದ್ದಾರೆ.

ತಂದೆಯ ವಿರೋಧ, ಕುಟುಂಬದೊಳಗಿನ ಮನಸ್ತಾಪ, ಹಣ-ಕಾಸಿನ ವಿಚಾರ ಹಾಗೂ ಪುತ್ರಿಯ ವೈಯಕ್ತಿಕ ಸಂಬಂಧ ಈ ಎಲ್ಲಾ ಅಂಶಗಳು ಹತ್ಯೆ ಪ್ರಕರಣಕ್ಕೆ ಸಂಬಂಧಿಸಿವೆಯೇ ಎಂಬುದು ತನಿಖೆಯಿಂದ ಸ್ಪಷ್ಟವಾಗಬೇಕಿದೆ.

### ಇಬ್ಬರು ಪೊಲೀಸ್ ವಶಕ್ಕೆ

ಪ್ರಕರಣದ ತನಿಖೆ ಮುಂದುವರಿದಿರುವ ನಡುವೆಯೇ ಪ್ರಿಯಾಂಕಾ ಹಾಗೂ ಸಂತೋಷ ಸಿಂಧೆ ಅವರನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

ಮೃತದೇಹವನ್ನು ಬೆಡ್‌ಶೀಟ್‌ನಲ್ಲಿ ಸುತ್ತಿ ರಸ್ತೆ ಬದಿಯಲ್ಲಿ ಎಸೆದಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ. ಹತ್ಯೆ ಬೇರೆಡೆ ನಡೆದ ಬಳಿಕ ಮೃತದೇಹವನ್ನು ಇಲ್ಲಿಗೆ ತಂದು ಎಸೆಯಲಾಗಿದೆಯೇ? ಹತ್ಯೆಗೆ ಬಳಸಿದ ವಸ್ತು ಯಾವುದು? ಘಟನೆಯಲ್ಲಿ ಇನ್ನೂ ಯಾರಾದರೂ ಭಾಗಿಯಾಗಿದ್ದಾರೆಯೇ? ಎಂಬ ಪ್ರಶ್ನೆಗಳಿಗೆ ತನಿಖೆಯಿಂದ ಉತ್ತರ ಸಿಗಬೇಕಿದೆ.

"ಪ್ರಕರಣಕ್ಕೆ ಸಂಬಂಧಿಸಿದಂತೆ ಮೃತರ ಕಿರಿಯ ಮಗಳು ನೀಡಿದ ದೂರಿನ ಆಧಾರದ ಮೇಲೆ ಮೃತನ ಹಿರಿಯ ಪುತ್ರಿ ಪ್ರಿಯಾಂಕಾ ಹಾಗೂ ಸಂತೋಷ ಸಿಂಧೆ ಎಂಬುವವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ."

■ ಪ್ರದೀಪ ಭಿಸೆ
ಸಿಪಿಐ, ಶಹರ ಪೊಲೀಸ್ ಠಾಣೆ, ಇಂಡಿ

ಸದ್ಯ ಪೊಲೀಸರು ಸಾಕ್ಷ್ಯಾಧಾರಗಳನ್ನು ಕಲೆಹಾಕುತ್ತಿದ್ದು, ವಿಚಾರಣೆ ಹಾಗೂ ಮುಂದಿನ ಪೊಲೀಸ್ ಮತ್ತು ನ್ಯಾಯಾಂಗ ಪ್ರಕ್ರಿಯೆಯಿಂದಲೇ ಪ್ರಕರಣದ ನಿಜಾಂಶ ಹೊರಬರಬೇಕಿದೆ.

**ತಂದೆಯ ವಿರೋಧವೇ ಕೊಲೆಗೆ ಕಾರಣವಾಯಿತೇ?**

ಒಬ್ಬ ನಿವೃತ್ತ ಶಿಕ್ಷಕರ ಅನುಮಾನಾಸ್ಪದ ಸಾವು ಇದೀಗ ಕುಟುಂಬದೊಳಗಿನ ಸಂಬಂಧಗಳತ್ತ ತನಿಖೆಯ ಕಣ್ಣು ತಿರುಗುವಂತೆ ಮಾಡಿದೆ. ಆದರೆ ಆರೋಪಗಳು ಇನ್ನೂ ತನಿಖಾ ಹಂತದಲ್ಲಿದ್ದು, ಅಂತಿಮ ಸತ್ಯ ಪೊಲೀಸ್ ತನಿಖೆ ಹಾಗೂ ನ್ಯಾಯಾಲಯದ ಪ್ರಕ್ರಿಯೆಯಿಂದಲೇ ನಿರ್ಧಾರವಾಗಬೇಕಿದೆ.

## ಜಲ ಜೀವನ್ ಮಿಷನ್‌ಗೆ ಹಿಡಿದ ಕಳಪೆ ಕಾಮಗಾರಿ ಗ್ರಹಣ!

### ನೆನೆಗುದಿಗೆ ಬಿದ್ದ ಮನೆ ಮನೆ ಗಂಗೆ ಯೋಜನೆ । ಪ್ರಧಾನಿ ಮಹತ್ವಾಕಾಂಕ್ಷಿ ಯೋಜನೆಗೆ ಗುನ್ನ । ಅಧಿಕಾರಿ-ಗುತ್ತಿಗೆದಾರರ ಒಳಒಪ್ಪಂದದ ಜುಗಲ್‌ಬಂದಿ

■ ಉದಯರಶ್ಮಿ ದಿನಪತ್ರಿಕೆ

ಕಲಬುರಗಿ: ಜಿಲ್ಲೆಯ ಅಫ್ಜಲ್ಪುರ್ ತಾಲೂಕಿನ ರಾಮನಗರ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ದಯಾನಂದ ನಗರದಲ್ಲಿ ಪೂರ್ಣಗೊಳ್ಳದ ಜಲ ಜೀವನ ಮಿಷನ್ ಯೋಜನೆಯ ನೀರಿನ ಟ್ಯಾಂಕ್ ಬೀಳುವ ಹಂತಕ್ಕೆ ಬಂದು ತಲುಪಿದೆ.

"ಮನೆ ಮನೆಗೆ ಗಂಗೆ ಇಲ್ಲ, ಅಧಿಕಾರಿಗಳಿಗೆ ಚಿಂತೆ ಇಲ್ಲ" ಎನ್ನುವಂತೆ ಆಗಿದೆ. ಪ್ರತಿ ಮನೆಗೂ ಶುದ್ಧ ಕುಡಿಯುವ ನೀರು ಒದಗಿಸುವ ಮಹತ್ವಾಕಾಂಕ್ಷೆಯ 'ಜಲ ಜೀವನ್ ಮಿಷನ್' (ಜೆಜೆಎಂ) ಯೋಜನೆ ಗ್ರಾಮೀಣ ಭಾಗದಲ್ಲಿ ಸಂಪೂರ್ಣ ಹಳ್ಳ ಹಿಡಿದಿದೆ. ಮನೆಗಳ ಮುಂದೆ ಕೇವಲ ಶೋಕಿಗಾಗಿ ನಲ್ಲಿಗಳನ್ನು (ಟ್ಯಾಪ್) ಅಳವಡಿಸಲಾಗಿದ್ದು, ಅವುಗಳಲ್ಲಿ ಹನಿ ನೀರೂ ಬಾರದೆ ಜನರು ಪರದಾಡುತ್ತಿದ್ದಾರೆ. ಗುತ್ತಿಗೆದಾರರ ಅತಿಯಾದ ನಿರ್ಲಕ್ಷ್ಯ ಮತ್ತು ಅಧಿಕಾರಿಗಳ ಜಾಣಕುರುಡಿನಿಂದಾಗಿ ಯೋಜನೆಯು ಅರ್ಧಕ್ಕೇ ನಿಂತು ಅಪೂರ್ಣಗೊಂಡಿದೆ.

ಕಾಮಗಾರಿಗೆ ಬಳಸಲಾದ ಪೈಪ್‌ಗಳು ಹಾಗೂ ಸಾಮಗ್ರಿಗಳು ಅತ್ಯಂತ ಕಳಪೆ ಗುಣಮಟ್ಟದ್ದಾಗಿದ್ದು, ಈಗಾಗಲೇ ಹಲವೆಡೆ ಒಡೆದು ಹಾಳಾಗಿವೆ. ಕೋಟ್ಯಂತರ ರೂಪಾಯಿ ಸಾರ್ವಜನಿಕರ ತೆರಿಗೆ ಹಣ ನೀರಿನಲ್ಲಿ ಹೋಮ ಮಾಡಿದಂತಾಗಿದ್ದು, ಜನರ ದಾಹ ಮಾತ್ರ ತೀರಿಲ್ಲ. ಗ್ರಾಮ ಪಂಚಾಯತಿ ಅಧಿಕಾರಿಗಳಿಗೆ ಹಾಗೂ ಜನಪ್ರತಿನಿಧಿಗಳಿಗೆ ಸಾರ್ವಜನಿಕರು ಹತ್ತಾರು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ.





ಕಾಮಗಾರಿಯ ಗುಣಮಟ್ಟ ಪರಿಶೀಲಿಸಬೇಕಾದ ಇಂಜಿನಿಯರ್‌ಗಳು ಸ್ಥಳಕ್ಕೆ ಭೇಟಿ ನೀಡದೆ ಕಚೇರಿಯಲ್ಲೇ ಕುಳಿತು ಸಹಿ ಹಾಕುತ್ತಿದ್ದಾರೆ ಎಂಬ ದೂರುಗಳಿವೆ.

ಜನರ ತೆರಿಗೆ ಹಣವನ್ನು ಲೂಟಿ ಮಾಡಿ ಜನರಿಗೆ ನೀರು ಕೊಡದ ಅಧಿಕಾರಿ-ಗುತ್ತಿಗೆದಾರರ ಒಳಒಪ್ಪಂದದ ಜುಗಲ್‌ಬಂದಿ ವಿರುದ್ಧ ಆಕ್ರೋಶ ವ್ಯಕ್ತವಾಗಿದೆ. ಬಾಯಾರಿದ ಹಳ್ಳಿಗಳ ಜನರ ತಾಳ್ಮೆಯ ಕಟ್ಟೆ ಒಡೆದಿದ್ದು, ಆಡಳಿತ ವರ್ಗದ ವಿರುದ್ಧ ಹಿಡಿಶಾಪ ಹಾಕುತ್ತಿದ್ದಾರೆ.

ಸಂಬಂಧಪಟ್ಟ ಕಳಪೆ ಗುತ್ತಿಗೆದಾರರನ್ನು ತಕ್ಷಣವೇ ಕಪ್ಪುಪಟ್ಟಿಗೆ (ಬ್ಲಾಕ್‌ಲಿಸ್ಟ್) ಸೇರಿಸಿ ಕಾನೂನು ಕ್ರಮ ಜರುಗಿಸಬೇಕಿದೆ.

ಯೋಜನೆಗೆ ಬಿಡುಗಡೆಯಾದ ಅನುದಾನ ಮತ್ತು ಕಾಮಗಾರಿಯ ನೈಜ ಸ್ಥಿತಿಯ ಬಗ್ಗೆ ಲೋಕಾಯುಕ್ತ ಅಥವಾ ಉನ್ನತ ಮಟ್ಟದ ತನಿಖೆಯಾಗಬೇಕು. ಅಪೂರ್ಣಗೊಂಡಿರುವ ಕಾಮಗಾರಿಗಳನ್ನು ತ್ವರಿತವಾಗಿ ಮತ್ತು ಗುಣಮಟ್ಟದಿಂದ ಪೂರ್ಣಗೊಳಿಸಲು ಜಿಲ್ಲಾಡಳಿತ ಕಟ್ಟುನಿಟ್ಟಿನ ಗಡುವು ನೀಡಬೇಕು. ಪ್ರತಿಯೊಬ್ಬ ನಾಗರಿಕನಿಗೂ ಜೀವಜಲ ಒದಗಿಸುವ ಸಂಕಲ್ಪವನ್ನು ಕೇವಲ ಭಾಷಣಕ್ಕೆ ಸೀಮಿತಗೊಳಿಸದೆ ವಾಸ್ತವಕ್ಕೆ ತರಬೇಕಿದೆ.

### ಗ್ರಾಮಸ್ಥರಿಂದ ಉಗ್ರ ಪ್ರತಿಭಟನೆ ಎಚ್ಚರಿಕೆ

ಕೂಡಲೆ ಈ ಭಾಗದ ಜನಪ್ರತಿನಿಧಿಗಳು ಮತ್ತು ಉನ್ನತ ಅಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳು ಮತ್ತು ಗುತ್ತಿಗೆದಾರರ ಒಳಒಪ್ಪಂದದ ಕಣ್ಣುಮುಚ್ಚಾಲೆಯಾಟಕ್ಕೆ ತೆರೆ ಎಳೆದು, ಅವರ ಮೇಲೆ ಕ್ರಮ ಕೈಗೊಂಡು ಜೆಜೆಎಂ ಕಳಪೆ ಕಾಮಗಾರಿಯನ್ನು ಆದಷ್ಟು ಬೇಗ ಸರಿಪಡಿಸಿ ಗ್ರಾಮಗಳಿಗೆ ಶುದ್ಧ ನೀರು ಪೂರೈಸದಿದ್ದರೆ ಖಾಲಿ ಕೊಡಗಳನ್ನು ಹಿಡಿದು ಜಿಲ್ಲಾಧಿಕಾರಿಗಳ ಕಚೇರಿ ಎದುರು ಉಗ್ರ ಪ್ರತಿಭಟನೆ ನಡೆಸುವುದಾಗಿ ಗ್ರಾಮಸ್ಥರು ಎಚ್ಚರಿಸಿದ್ದಾರೆ.



# ಸ್ವಾರ್ಥಬಿಟ್ಟು ಬಾಳೋಣ, ಮಾನವೀಯತೆ ಮೆರೆಯೋಣ

■ ಉದಯರಶ್ಮಿ ದಿನಪತ್ರಿಕೆ

ಇಂದು (ಅಗಷ್ಟ 19, ಬುಧವಾರ) "ವಿಶ್ವ ಮಾನವೀಯತೆ ದಿನ" ದ ಪ್ರಯುಕ್ತ ಈ ವಿಶೇಷ ಲೇಖನ

ಶಿವರಾಂ ಕಾರಂತ ಅವರು "ಬಾಳ್ವೆ ಇರುವುದು ಕಲಿಯುವುದಕ್ಕೆ, ಕಲಿತು ತಿದ್ದಿಕೊಳ್ಳುವುದಕ್ಕೆ. ತಿದ್ದಿ ತೃಪ್ತಿ ಪಡುವುದಕ್ಕೆ, ಬಾಳ್ವೆ ಇರುವುದು ಬದುಕುವುದಕ್ಕಾಗಿ, ಬದುಕಿ ಬೆಳೆಯುವುದಕ್ಕಾಗಿ" ಎಂದು ಹೇಳಿದ್ದಾರೆ.

ಮಾನವ ಧರ್ಮ ಮತ್ತು ಮನುಷ್ಯತ್ವವೇ ಶ್ರೇಷ್ಠವಾದುದು. ಈ ಜಗತ್ತಿನಲ್ಲಿ ಯಾರೇ ಸಂಕಷ್ಟದಲ್ಲಿದ್ದವರಿಗೆ ಅವರಿಗೆ ಸಹಾಯ ಹಸ್ತ ಮತ್ತು ನೊಂದವರ ಕಣ್ಣೀರು ಒರೆಸುವ ಮತ್ತು ಸಾಂತ್ವನದೊಂದಿಗೆ ಸಹಾಯ–ಸಹಕಾರ ನೀಡಬೇಕು. ಪರಸ್ಪರ ಪ್ರೀತಿ ಹಂಚಿಕೊಂಡು ಆತ್ಮವಿಶ್ವಾಸದಿಂದೊಂದಿಗೆ ಬದುಕುತ್ತಾ, ಮಾನವೀಯತೆಯನ್ನು ಮೆರೆಯೋಣ ಮತ್ತು ಉಳಿಸಿ–ಬೆಳೆಸೋಣ. ತಮ್ಮ ಜೀವನವನ್ನೇ ಸದಾ ಮನುಕುಲದ ಸೇವೆಗಾಗಿ ಮುಡಿಪಾಗಿಟ್ಟ ಮತ್ತು ನಿಸ್ವಾರ್ಥತೆಯಿಂದ ಶ್ರಮಿಸುವ ಮತ್ತು ಸಂಕಷ್ಟದಲ್ಲಿರುವವರಿಗೆ ಮಾನವೀಯತೆ ಮತ್ತು ಸಹಾಯ ಮಾಡುವವರನ್ನು ಸ್ಮರಿಸುವ ಉದ್ದೇಶದಿಂದ ಪ್ರತಿವರ್ಷ ಅಗಷ್ಟ 19 ರಂದು ವಿಶ್ವ ಮಾನವೀಯತೆ ದಿನವೆಂದು ಆಚರಿಸಲಾಗುತ್ತದೆ.

**ಈ ದಿನದ ಆಚರಣೆಯ ಉದ್ಧೇಶ**

ಪ್ರಕೃತಿ ವಿಕೋಪ, ಯುದ್ಧದ ಸಂದರ್ಭ, ತೀವ್ರ ಬಿಕಟ್ಟು ಮತ್ತು ಮಾರಣಾಂತಿಕ ಕೋವಿಡ್‌ನಂತಹ ಕಾಲಘಟ್ಟದಲ್ಲಿ ತಮ್ಮ ಜೀವದ ಹಂಗು ತೊರೆದು ಮಾನವೀಯತೆಯೊಂದಿಗೆ ಯುದ್ಧೋಪಾದಿಯಲ್ಲಿ ಜನರನ್ನು ರಕ್ಷಿಸುವದು ಮತ್ತು ಕಷ್ಟಕಾಲದಲ್ಲಿ ಜನರಿಗೆ ಪರಸ್ಪರ





ಸಹಾಯ ಸಹಕಾರ ಮತ್ತು ರಕ್ಷಣೆ ನೀಡುವ ಗುಣವನ್ನು ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸುವುದು ಮತ್ತು ಉತ್ತೇಜಿಸುವುದು ಈ ದಿನದ ಆಚರಣೆಯ ಪ್ರಮುಖ ಧ್ಯೇಯವಾಗಿದೆ.

ಮಾನವೀಯತೆ ಬಗ್ಗೆ
ಸಮಾಜದಲ್ಲಿ ಅರಿವು ಮೂಡಿಸಿ

ಸಂಕಷ್ಟದಲ್ಲಿರುವ ಜನರು ಮತ್ತು ಸಂತ್ರಸ್ತರ ರಕ್ಷಣೆ ಮತ್ತು ಸಹಾಯ ಮಾಡುವಲ್ಲಿ ಜೀವನವನ್ನೇ ಅರ್ಪಿಸಿದ ಮತ್ತು ಪ್ರಾಣ ತ್ಯಾಗ ಮಾಡಿದ ಮಾನವೀಯತೆಯ ಕಾರ್ಯಕರ್ತರು ಮತ್ತು ಸ್ವಯಂ ಸೇವಕರನ್ನು ಗೌರವಿಸುತ್ತಾ, ಅವರ ತ್ಯಾಗ ಮತ್ತು ಸೇವೆಯನ್ನು ಸ್ಮರಿಸಲು ಈ ದಿನದ ಆಚರಣೆಯ ವಿಶೇಷತೆಯಾಗಿದೆ. ಜಾತಿ, ಮತ, ಧರ್ಮ, ಜನಾಂಗ ಮತ್ತು ದೇಶಗಳ ಗಡಿಗಳ ಎಲ್ಲೆ ಮೀರಿ ಇಡೀ ಮಾನವ ಕುಲಕ್ಕೆ ಸಹಾಯ ಮಾಡಲು ಈ ದಿನವು ಪ್ರೇರೇಪಿಸುತ್ತದೆ. ವಿಶ್ವದೆಲ್ಲೆಡೆ ನಡೆಯುವ ಮಾನವೀಯತೆ ಮತ್ತು ನಿಸ್ವಾರ್ಥ ಸೇವಾ ಕಾರ್ಯಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು.

**2026 ನೇಯ ವರ್ಷದ ಘೋಷವಾಕ್ಯ**

ಈ ವಿಶ್ವ ಮಾನವತಾ ದಿನದ ಆಚರಣೆಯು 2026 ನೇಯ ವರ್ಷಕ್ಕಾಗಿ "ಮಾನವತೆಗಾಗಿ ಕಾರ್ಯನಿರ್ವಹಿಸಿ" ಎಂಬ ಸಂದೇಶದೊಂದಿಗೆ ಜಾಗತಿಕ ಒಗ್ಗಟ್ಟನ್ನು ಬಲಪಡಿಸುವುದು ಮತ್ತು ಸ್ಥಳೀಯ ಸಮುದಾಯಗಳನ್ನು ಸಬಲೀಕರಣಗೊಳಿಸುವುದು" ಎಂಬ ಧ್ಯೇಯವಾಕ್ಯವನ್ನು ಹೊಂದಿದೆ.

**ಕೊನೆಯ ನುಡಿ**

ಮಹಾತ್ಮಾ ಗಾಂಧೀಜಿಯವರು "ನಾವು ಮಾನವೀಯತೆಯ ಮೇಲಿನ ನಂಬಿಕೆಯನ್ನು ಎಂದಿಗೂ ಕಳೆದುಕೊಳ್ಳಬಾರದು. ಮಾನವೀಯತೆ ಎಂಬುದು ಸಾಗರವಿದ್ದಂತೆ. ಸಮುದ್ರದ ಒಂದೆರಡು ಹನಿಗಳು ಮಲಿನವಾದ ಮಾತ್ರಕ್ಕೆ ಇಡೀ ಸಮುದ್ರವೇ ಮಲಿನವಾಗುವುದಿಲ್ಲ" ಎಂದು ಹೇಳಿದ್ದಾರೆ. ಮನುಕುಲದ ಕಲ್ಯಾಣವೇ ನಮ್ಮ ಬದುಕಿನ ಗುರಿಯಾಗಬೇಕು. ಇದನ್ನೇ 12 ನೇಯ ಶತಮಾನದಲ್ಲಿ ಬಸವಣ್ಣನವರು ತಮ್ಮ ವಚನಗಳ ಮೂಲಕ ಸಮ ಸಮಾಜದ ನಿರ್ಮಾಣ ಮತ್ತು ಕಲ್ಯಾಣ ರಾಜ್ಯಕ್ಕಾಗಿ ಸಮಾಜದಲ್ಲಿನ ಅಂಕು ಡೊಂಕುಗಳನ್ನು ಹೋಗಲಾಡಿಸಿದರು. ಜಾಗತಿಕ ಮಟ್ಟದಲ್ಲಿ ಎದುರಾಗುವ ಮಾನವೀಯತೆಗೆ ಸಂಬಂಧಿಸಿದಂತೆ ಬಿಕ್ಕಟ್ಟುಗಳನ್ನು ಎಲ್ಲ ದೇಶಗಳು ಒಗ್ಗಟ್ಟಾಗಿ ನಿಂತು ವಿಶ್ವದಲ್ಲಿ ಶಾಂತಿ, ಸಹಕಾರ, ಸಮನ್ವಯತೆ ಮತ್ತು ಐಕ್ಯತೆ ಮೂಡುವಂತೆ ಕ್ರಮ ಕೈಗೊಳ್ಳಬೇಕಾಗಿದೆ. ಆರ್ಥಿಕ, ಸಾಮಾಜಿಕ ಮತ್ತು ಶೈಕ್ಷಣಿಕವಾಗಿ ಹಿಂದುಳಿದ ಕೆಳವರ್ಗದ ಮತ್ತು ತಳಮಟ್ಟದ ಜನರಿಗೆ ಮತ್ತು ಸಮುದಾಯಗಳಿಗೆ ಎಲ್ಲ ರೀತಿಯ ಸಬಲರನ್ನಾಗಿಸುವಲ್ಲಿ ಶ್ರಮಿಸಬೇಕಾಗಿದೆ. ನಾವೆಲ್ಲರೂ ಒಂದೇ ಎಂಬ ಸಮಷ್ಠಿಭಾವದೊಂದಿಗೆ 'ವಸುದೈವ ಕುಟುಂಬಕಂ' ಎನ್ನುವಂತೆ ಸಹಬಾಳ್ವೆಯಿಂದ ಬಾಳಿ–ಬದುಕಬೇಕು. ಅಂದಾಗ ಮಾತ್ರ ಈ ದಿನದ ಆಚರಣೆಯು ಅರ್ಥಪೂರ್ಣ ಮತ್ತು ಸಾರ್ಥಕವಾಗಲು ಸಾಧ್ಯ.



ಲೇಖನ
■ ಮಲ್ಲಪ್ಪ. ಸಿ. ಖೊದ್ನಾಪೂರ
(ತಿಕೋಟಾ)
ಉಪನ್ಯಾಸಕರು
ವಿಜಯಪುರ



# ರಾಯಣ್ಣ ಉತ್ಸವ ಪೂರ್ವಭಾವಿ ಸಭೆ :ಆ.23 ರಂದು ಉತ್ಸವ



■ ಉದಯರಶ್ಮಿ ದಿನಪತ್ರಿಕೆ

ತಿಕೋಟಾ: ಆ.23 ರಂದು ವಿಜಯಪುರ ಜಿಲ್ಲೆಯಲ್ಲಿ ನಡೆಯಲಿರುವ ಸಂಗೊಳ್ಳಿ ರಾಯಣ್ಣ ಉತ್ಸವ ಕಾರ್ಯಕ್ರಮದ ಯಶಸ್ವಿ ಆಯೋಜನೆಗಾಗಿ ತಿಕೋಟಾ ತಾಲೂಕು ಮಟ್ಟದ ಪೂರ್ವಭಾವಿ ಸಭೆ ಜರುಗಿತು.

ಸಭೆಯಲ್ಲಿ ಭಾಗವಹಿಸಿದ ಮುಖಂಡರು ಉತ್ಸವದ ರೂಪುರೇಷೆಗಳು, ಕಾರ್ಯಕ್ರಮದ ಸಿದ್ಧತೆಗಳು, ಸಾರ್ವಜನಿಕರ ಭಾಗವಹಿಸುವಿಕೆ, ಶಿಸ್ತು ಹಾಗೂ ವ್ಯವಸ್ಥೆಗಳ ಕುರಿತು ಚರ್ಚಿಸಿ ಅಗತ್ಯ ಸಲಹೆಗಳನ್ನು ನೀಡಲಾಯಿತು. ಉತ್ಸವವನ್ನು ಅದ್ದೂರಿಯಾಗಿ ಹಾಗೂ ಯಶಸ್ವಿಯಾಗಿ ನಡೆಸಲು ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸುವಂತೆ ಕರೆ ನೀಡಲಾಯಿತು.

ರಾಯಣ್ಣರ ಶೌರ್ಯ, ಸಾಹಸ ಮತ್ತು ದೇಶಭಕ್ತಿಯನ್ನು ಸ್ಮರಿಸುವ ಈ ಉತ್ಸವದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಕೈಜೋಡಿಸುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಹುಲಿಜಂತಿಯ ಮಾಳಿಂಗರಾಯ ಮಹಾರಾಜರು, ಅಮೋಘಸಿದ್ದೇಶ್ವರ ದೇವಸ್ಥಾನದ ಧರ್ಮದರ್ಶಿ ಅಪ್ಪು ಒಡೆಯರ್, ಮಲ್ಲಪ್ಪ ಪೂಜಾರಿ ಗದಗಿ ಪೂಜಾರಿ, ವಿಜಯಪುರ ಜಿಲ್ಲೆಯ ರಾಯಣ್ಣ ಉತ್ಸವ ಸಮಿತಿ ಅಧ್ಯಕ್ಷರಾದ ಪ್ರಕಾಶ್ ಜಾಲಗೇರಿ, ತಿಕೋಟ ತಾಲೂಕಿನ ಹಾಲುಮತ ಸಮಾಜದ ಹಿರಿಯರಾದ ರಾಮಣ್ಣ ಮೆಂಡೆಗಾರ ವಕೀಲರು, ಮಾಜಿ ಜಿಪಂ ಸದಸ್ಯರಾದ ಸಾಬು ಮಾಶ್ಯಾಳ, ಮಾಯಪ್ಪ ಪೂಜಾರಿ, ಲೇಪು ಕೊಣ್ಣೂರ, ಭೀಮಸೇನ್ ನಾಟಕಕಾರ, ಅಪ್ಪಾಸಿ ಮಗದರಿ, ರವಿ ಡೊಂಬಳಿ, ಹನುಮಂತ ಸೋನಂದ, ಶ್ರೀಮಂತ ಬನ್ನನವರ, ಸಿದ್ದರಾಯ ಜಿಡ್ಡಿ, ಮಡ್ಡಿಸಿದ ಕುಮಟಗಿ, ರವಿ ಬಿದರಿ, ಮುತ್ತು ಲಂಗೋಟಿ, ಮುತ್ತಪ್ಪ ಪಕೀರಪ್ಪಗೋಳ, ಬಾಬು ಮೆಟ್ ಗುಡ್, ಗುರುನಾಥ ಹಂಜಗಿ, ಸುರೇಶ ಪೂಜಾರಿ, ತಿಪ್ಪಣ್ಣ ಕೊಣೊರ್, ಶಿವಾನಂದ ವಿಜಾಪುರ್, ಭೀಮು ಕುಮಟಗಿ, ತಾಲೂಕಿನ ಹಾಲುಮತ ಸಮಾಜದ ಮುಖಂಡರು ,

ಇತರರು ಇದ್ದರು. ಶಿವಾನಂದ ಹಂಜಗಿ ನಿರೂಪಿಸಿದರು ಸುರೇಶ ಕೊಣ್ಣೂರ ಸ್ವಾಗತಿಸಿದರು, ವಾಸು ಹಂಜಗಿ ವಂದಿಸಿದರು.

# ಆಲಮಟ್ಟಿ ಡ್ಯಾಂ ಬಹುತೇಕ ಭರ್ತಿ: ಬಾಗಿನ ಅರ್ಪಣೆಗೆ ಸಿಎಂ ಗೆ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ಮಹಾರಾಷ್ಟ್ರ ಹಾಗೂ ಕರ್ನಾಟಕದ ಕೃಷ್ಣಾ ಜಲಾನಯನ ಪ್ರದೇಶದಲ್ಲಿ ಜುಲೈನಿಂದ ಸುರಿದ ಭಾರಿ ಮಳೆಯಿಂದಾಗಿ ಕೃಷ್ಣಾ ನದಿಯಲ್ಲಿ ಅಪಾರ ಪ್ರಮಾಣದ ನೀರು ಹರಿದುಬಂದಿದೆ. ಇದರಿಂದ ಆಲಮಟ್ಟಿ ಲಾಲ್ ಬಹದ್ದೂರ್ ಶಾಸ್ತ್ರಿ ಜಲಾಶಯ ಬಹುತೇಕ ಭರ್ತಿಯಾಗಿದೆ.

ಜಲಾಶಯ ಭರ್ತಿಯ ಹಂತ ತಲುಪಿದ್ದರೂ ಕೃಷ್ಣಾ ನದಿಗೆ ಸಾಂಪ್ರದಾಯಿಕವಾಗಿ ಸಲ್ಲಿಸುವ ಬಾಗಿನ ಅರ್ಪಣೆ ಮಾತ್ರ ಇನ್ನೂ ನಡೆದಿಲ್ಲ. ಹೀಗಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ವಿಧಾನಮಂಡಲ ಅಧಿವೇಶನ ಮುಗಿದ ಬಳಿಕ ಆಲಮಟ್ಟಿಗೆ ಆಗಮಿಸಿ ಕೃಷ್ಣೆಗೆ ಬಾಗಿನ ಅರ್ಪಿಸಬೇಕು ಎಂಬ ಒತ್ತಾಯ ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳಲ್ಲಿ ಬಲವಾಗಿ ಕೇಳಿಬರುತ್ತಿದೆ.

"ಕಾವೇರಿಗೆ ಸಿಗುವಷ್ಟೇ ಗೌರವ ಕೃಷ್ಣೆಗೂ ಸಿಗಲಿ"

ಕೃಷ್ಣಾ ನದಿ ಉತ್ತರ ಕರ್ನಾಟಕದ ಜೀವನಾಡಿಯಾಗಿದ್ದು, ಲಕ್ಷಾಂತರ ಎಕರೆ ಕೃಷಿ ಭೂಮಿಗೆ ನೀರಾವರಿ ಸೌಲಭ್ಯ ನೀಡುತ್ತಿದೆ. ಪ್ರತಿ ವರ್ಷ ಜಲಾಶಯ ಭರ್ತಿಯಾದಾಗ ಬಾಗಿನ ಅರ್ಪಿಸುವ ಪರಂಪರೆ ಇದೆ. 2002ರಲ್ಲಿ ಅಂದಿನ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರು ಈ ಪರಂಪರೆ ಆರಂಭಿಸಿದ್ದರು.

ಆದರೆ ಕಾವೇರಿ ಜಲಾಶಯಗಳಿಗೆ ನೀಡುವಷ್ಟರ ಮಟ್ಟಿನ ಮಹತ್ವವನ್ನು ಕೃಷ್ಣಾ ನದಿಗೆ ನೀಡಲಾಗುತ್ತಿಲ್ಲ ಎಂಬ ಅಸಮಾಧಾನ ಸ್ಥಳೀಯರಲ್ಲಿದೆ.

ರೈತ ಸಂಘಗಳ ಆಗ್ರಹ

ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಮಾತನಾಡಿ, "ಕೆಆರ್‌ಎಸ್ ಜಲಾಶಯ ಭರ್ತಿಯಾದಾಗ ಮುಖ್ಯಮಂತ್ರಿ ಯಾರೇ ಆಗಿದ್ದರೂ ಬಾಗಿನ ಅರ್ಪಿಸುವ ಸಂಪ್ರದಾಯವಿದೆ. ಅದೇ ರೀತಿಯಲ್ಲಿ ಆಲಮಟ್ಟಿಯಲ್ಲೂ ಕೃಷ್ಣೆಗೆ ಗೌರವ ಸಲ್ಲಿಸುವ ಪರಂಪರೆ ಮುಂದುವರಿಯಬೇಕು" ಎಂದು ಹೇಳಿದರು.

ಕೃಷ್ಣಾ ತೀರ ಮುಳುಗಡೆ ಸಂತ್ರಸ್ತರ ಕ್ಷೇಮಾಭಿವೃದ್ಧಿ ಸಂಸ್ಥೆಯ ವಿಜಯಪುರ ಜಿಲ್ಲಾ ಸಂಚಾಲಕ ಜಿ.ಸಿ. ಮುತಾಲದಿನ್ನಿ, "ಒಳಹರಿವು ನಿಧಾನವಾಗಿ ಕಡಿಮೆಯಾಗುತ್ತಿದೆ. ನೀರಿನ ಮಟ್ಟ ಕುಸಿದ ಬಳಿಕ ಬಾಗಿನ ಅರ್ಪಿಸಲು ಸಾಧ್ಯವಾಗುವುದಿಲ್ಲ. ಸರ್ಕಾರ ಶೀಘ್ರವೇ ದಿನಾಂಕ ನಿಗದಿಪಡಿಸಬೇಕು" ಎಂದು ಒತ್ತಾಯಿಸಿದರು.

ಯುಕೆಪಿ ಪ್ರಗತಿ ಪರಿಶೀಲನೆಗೆ ಬೇಡಿಕೆ

ಬಾಗಲಕೋಟೆ ಅಭಿವೃದ್ಧಿ ಹೋರಾಟ ಸಮಿತಿಯ ಕಾರ್ಯದರ್ಶಿ ಅರವಿಂದ ಮುಚಖಂಡಿ, ಮುಖ್ಯಮಂತ್ರಿ ಅವರು ಆಲಮಟ್ಟಿಗೆ ಬಂದಾಗ ಕೆಬಿಜೆಎನ್‌ಎಲ್ ಹಾಗೂ ಯುಕೆಪಿ ಮೂರನೇ ಹಂತ, ಜಲಾಶಯದ ಎತ್ತರ ಹೆಚ್ಚಿಸುವ ಯೋಜನೆಗಳ ಪ್ರಗತಿಯನ್ನು ಪರಿಶೀಲಿಸಬೇಕು ಎಂದು ಆಗ್ರಹಿಸಿದ್ದಾರೆ.

ಮುಳುಗಡೆ ಭಾಗದ ನಿರೀಕ್ಷೆ

ಈ ಹಿಂದೆ ನೀರಾವರಿ ಸಚಿವರಾಗಿದ್ದಾಗ ಆಲಮಟ್ಟಿಗೆ ಭೇಟಿ ನೀಡಿದ್ದ ಡಿ.ಕೆ. ಶಿವಕುಮಾರ್ ಅವರು ಇದೀಗ ಮುಖ್ಯಮಂತ್ರಿಯಾಗಿ ಬಂದು ಬಾಗಿನ ಅರ್ಪಿಸಬೇಕು ಎಂಬುದು ಉತ್ತರ ಕರ್ನಾಟಕದ ಜನರ ಆಶಯವಾಗಿದೆ.


ಕೃಷ್ಣಾ ನದಿ ಇಲ್ಲಿನ ಜನರ ಬದುಕು, ಕೃಷಿ ಮತ್ತು ಆರ್ಥಿಕತೆಯೊಂದಿಗೆ ಬೆಸೆದುಕೊಂಡಿರುವುದರಿಂದ ಬಾಗಿನ ಅರ್ಪಣೆಯನ್ನು ಕೇವಲ ಧಾರ್ಮಿಕ ಆಚರಣೆಯಾಗಿ ನೋಡದೆ, ಸರ್ಕಾರದ ಬದ್ಧತೆಯನ್ನು ವ್ಯಕ್ತಪಡಿಸುವ ಕಾರ್ಯಕ್ರಮವಾಗಿ ಆಯೋಜಿಸಬೇಕು ಎಂಬ ಒತ್ತಾಯ ಬಲಗೊಳ್ಳುತ್ತಿದೆ.

ಇವತ್ತಿನ ನೀರಿನ ಮಟ್ಟ: 519.6 ಮೀಟರ್ ಗರಿಷಠ ಮಟ್ಟ ಜಲಾಶಯದಲ್ಲಿ 123.081 ಟಿ.ಎಂ.ಸಿ. ಅಡಿ ನೀರು ಸಂಗ್ರಹ ಸಾಮರ್ಥ್ಯ ಹೊಂದಿರುವ ಆಲಮಟ್ಟಿ ಜಲಾಶಯದಲ್ಲಿ ಪ್ರಸಕ್ತ519.59ಮೀಟರ್ ನೀರಿನಮಟ್ಟವಿದ್ದು.122.834 ಟಿ.ಎಂ.ಸಿ ಅಡಿ ನೀರು ಸಂಗ್ರಹವಿದೆ. (99.80%)

ಆಲಮಟ್ಟಿ ಜಲಾಶಯಕ್ಕೆ ನೀರು ಹರಿಸುವ ಹಿಪ್ಪರಗಿ ಬ್ಯಾರೇಜ್ ಕೂಡ ಸುಮಾರು 15 ದಿನಗಳ ಹಿಂದೆಯೇ ಭರ್ತಿಯಾಗಿದೆ ಎಂದು ತಿಳಿದುಬಂದಿದೆ.



# ಸದೃಢ ಸಮಾಜ ನಿರ್ಮಾಣಕ್ಕೆ ಶ್ರಮಿಸಿ



ಕಲಬುರಗಿ: ಬ್ರಿಟಿಷರ ವಿರುದ್ಧ ದೀರ್ಘಕಾಲ ಹೋರಾಟ ಮಾಡಿದ ಗಾಂಧೀಜಿರವರು ಭಾರತಕ್ಕೆ ಸ್ವಾತಂತ್ರ್ಯ ದೊರಕಿಸಿ ಕೊಟ್ಟರು. ಹಲವಾರು ಹೋರಾಟಗಾರರು ಈ ದೇಶದ ಸ್ವಾತಂತ್ರ್ಯಗೋಸ್ಕರ ತ್ಯಾಗ ಬಲಿದಾನ ಮಾಡಿದರು. ಅವರೆಲ್ಲರ ಪರಿಶ್ರಮದಿಂದ ಇಂದು ನಾವು ಸ್ವತಂತ್ರ ಭಾರತದಲ್ಲಿ ಬದುಕುತ್ತಿದ್ದೇವೆ. ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಜ್ಞಾನ ಸಂಪಾದಿಸಿಕೊಂಡು ಸದೃಢ ಸಮಾಜ ಮತ್ತು ಸಮೃದ್ಧ ದೇಶ ಕಟ್ಟಲು ಶ್ರಮಿಸಬೇಕೆಂದು ಪ್ರಾಂಶುಪಾಲರಾದ ಸುಜಾತಾ ಎಸ್. ಬಿರಾದಾರ ಹೇಳಿದರು.

ನಗರದ ಸರಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ 80ನೇ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ಅವರು ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ನಿರಂತರವಾಗಿ ಅಭ್ಯಾಸ ಮಾಡಿ ಸುಂದರ ಸಮಾಜ ನಿರ್ಮಿಸಲು ಶ್ರಮಿಸಬೇಕೆಂದರು.

ನಂತರ ಎನ್‌ಎಸ್‌ಎಸ್ ವಿಭಾಗೀಯ ಅಧಿಕಾರಿ ಡಾ.ಚಂದ್ರಶೇಖರ ದೊಡ್ಡಮನಿ ಮಾತನಾಡಿ, ಮಹಾತ್ಮ ಗಾಂಧೀಜಿ ಮತ್ತು ಬಾಬಾ ಸಾಹೇಬ್ ಅಂಬೇಡ್ಕರ್ ಭಾರತದ ಎರಡು ಕಣ್ಣುಗಳು ಇದ್ದಂತೆ. ಗಾಂಧೀಜಿ ತಮ್ಮ ಸರಳ ಜೀವನ, ಪ್ರಾಮಾಣಿಕತೆ ಮತ್ತು ಅಹಿಂಸೆಯ ಮೂಲಕ ಭಾರತವನ್ನು ಬ್ರಿಟಿಷರಿಂದ ವಿನೋಚನೆಗೊಳಿಸಿದರು. ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಭಾರತದಲ್ಲಿನ ವರ್ಣಾಶ್ರಮ ಪದ್ಧತಿ ಮತ್ತು ಜಾತಿ ತಾರತಮ್ಯ ತೊಡೆದು ಹಾಕಲು ಸಂವಿಧಾನಾತ್ಮಕ ಹಕ್ಕುಗಳನ್ನು ನೀಡಿದರು. ಸ್ತ್ರೀಯರಿಗೆ ಸಂವಿಧಾನಿಕ ಹಕ್ಕು ಹಾಗೂ ಅಧಿಕಾರಿಗಳನ್ನು ದೊರಕಿಸಿಕೊಟ್ಟು ಎಲ್ಲಾ ಭಾರತೀಯರು ಸಮಾನತೆ ಮತ್ತು ಸಹಬಾಳ್ವೆಯಿಂದ ಬದುಕಲು ಸಾಂವಿಧಾನಿಕ ರಕ್ಷಣೆ ನೀಡಿದರು.

# ತಾರಕ, ಕಬಿನಿ ನಾಲೆಗಳಿಗೆ ಕಲುಷಿತ ನೀರು ಸೇರ್ಪಡೆ

## ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳಿಂದ ನೀರಿನ ಮಾದರಿ ಸಂಗ್ರಹ

■ ಉದಯರಶ್ಮಿ ದಿನಪತ್ರಿಕೆ

ಎಚ್ ಡಿ ಕೋಟೆ: ತಾಲೂಕಿನ ಜೀವನಾಡಿ ತಾರಕಾ ಮತ್ತು ಕಪಿಲಾ ನದಿಗೆ ಕಲುಷಿತ ನೀರು ಸೇರ್ಪಡೆ ಆರೋಪ ಸಂಬಂಧ ಜಿಲ್ಲಾ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಸೋಮವಾರ ತಾಲೂಕಿಗೆ ಭೇಟಿ ನೀಡಿ ನೀರಿನ ಮಾದರಿ ಸಂಗ್ರಹಿಸಿದರು.

ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಮೈಸೂರು ಗ್ರಾಮಾಂತರ ಪರಿಸರ ಇಲಾಖಾಧಿಕಾರಿ ಜಯಲಕ್ಷ್ಮಿ ನೇತೃತ್ವದ ತಂಡ ತಾಲೂಕಿಗೆ ಆಗಮಿಸಿ ಕಲುಷಿತ ನೀರು ಸೇರ್ಪಡೆ ಆಗುವ ಸ್ಥಳಗಳಿಗೆ ಭೇಟಿ ನೀಡಿ ನೀರಿನ ಮಾದರಿ ಸಂಗ್ರಹಿಸಿತ್ತು. ಪಟ್ಟಣದ ಒಂದನೇ ವಾರ್ಡ್, ಮುಸ್ಲಿಂ ಬ್ಲಾಕ್ ಮತ್ತು ರಾಮಲಿಂಗೇಶ್ವರ ದೇವಸ್ಥಾನ ಹಳೆ ಸೇತುವೆ ಕಾಲುವೆಯಲ್ಲಿ ನೀರಿನ ಮಾದರಿ ಸಂಗ್ರಹಿಸಿತ್ತು. ಬಳಿಕ ತಾರಕ ನದಿಯ ಬಲದಂಡೆ ನಾಲೆಗೆ ಸೇರುತ್ತಿರುವ ಹೈರಿಗೆ ಗ್ರಾಮ ಮತ್ತು ತಾರಕ ಮತ್ತು ಕಬಿನಿ ನೀರು ಸೇರುವ ಹೆಚ್ ಮಟಕೆರೆ ಗ್ರಾಮದ ಶ್ರೀ ರಾಮಲಿಂಗೇಶ್ವರ ದೇವಸ್ಥಾನದ ಸಮೀಪ ನಾಲೆಯಲ್ಲಿ ನೀರು ಸಂಗ್ರಹಿಸಿತ್ತು

ಜಯಲಕ್ಷ್ಮಿ ಮಾತನಾಡಿ, ಹೆಚ್ ಡಿ ಕೋಟೆ ಪಟ್ಟಣದಲ್ಲಿ ಮೂರು ಕಡೆ ಹಾಗೂ ಎರಡು ಗ್ರಾಮಗಳಲ್ಲಿ ಕಲುಷಿತ ನೀರಿನ ಮಾದರಿ ಸಂಗ್ರಹಿಸಿದ್ದು, ಪ್ರಯೋಗಾಲಯಕ್ಕೆ ಕಳುಹಿಸುತ್ತೇವೆ. ಮೇಲ್ನೋಟಕ್ಕೆ ನದಿಗಳಿಗೆ ಕಲುಷಿತ ನೀರು ಸೇರುತ್ತಿರುವುದು ಕಂಡುಬಂದಿದೆ. ಪ್ರಯೋಗಾಲಯದಿಂದ ರಿಪೋರ್ಟ್ ಬರಲು 15 ರಿಂದ ಒಂದು ತಿಂಗಳು ಬೇಕಾಗುತ್ತೆ. ಅವರು ರಿಪೋರ್ಟ್ ಕಳಿಸಿದ ತಕ್ಷಣ, ಜಿಲ್ಲಾಧಿಕಾರಿ ಸೇರಿದಂತೆ ನಮ್ಮ ಮೇಲಿನ ಅಧಿಕಾರಿಗೆ ವರದಿ ನೀಡುತ್ತೇವೆ. ನಂತರ ವರದಿ ಆಧರಿಸಿ ಅಧಿಕಾರಿಗಳು ಕಲುಷಿತ ನೀರು, ನದಿಯ ಮೂಲಗಳಿಗೆ ಹರಿಯದಂತೆ ಸೂಕ್ತ ಕ್ರಮ ತೆಗೆದುಕೊಳ್ಳುತ್ತಾರೆ ಎಂದು ಹೇಳಿದರು. ತಹಸೀಲ್ದಾರ್ ಶ್ರೀನಿವಾಸ್ ಮಾತನಾಡಿ, ತಾರಕ ಮತ್ತು ಕಬಿನಿ ನದಿಗಳಿಗೆ ಕಲುಷಿತ ನೀರು ಸೇರುತ್ತಿರುವ ಬಗ್ಗೆ ಸಾಮಾಜಿಕ ಜಾಲತಾಣಗಳಿಂದ ವಿಚಾರ ತಿಳಿದು ಬಂತು. ಈ ಸಂಬಂಧ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಭೇಟಿ ನೀಡಿ, ನೀರಿನ ಮಾದರಿ ಸಂಗ್ರಹಿಸಿದ್ದು, ಪ್ರಯೋಗಾಲಯಕ್ಕೆ ಕಳುಹಿಸಲಿದ್ದಾರೆ. ವರದಿ ಬಂದ ಬಳಿಕ ಮೇಲಧಿಕಾರಿಗಳು ನೀಡುವ ಮಾರ್ಗಸೂಚಿ ಪ್ರಕಾರ ಕಲುಷಿತ ನೀರು ಸೇರದಂತೆ ಸೂಕ್ತ ಕ್ರಮ ಕೈಗೊಳ್ಳುತ್ತೇವೆ ಎಂದರು.

ತಾರಕ ಎಇಇ ನಟಶೇಖರ್ ಮೂರ್ತಿ ಮಾತನಾಡಿ, ಹೆಚ್ ಡಿ ಕೋಟೆ ತಾಲೂಕಿನಲ್ಲಿ ಹರಿಯುತ್ತಿರುವ ತಾರಕ ಮತ್ತು ಹೆಬ್ಬಾಳ ಜಲಾಶಯದ ನಾಲೆಗಳಿಗೆ ಪಟ್ಟಣದ ಚರಂಡಿ ನೀರು ಸೇರುತ್ತಿದ್ದು, ಈ ಸಂಬಂಧ ಗ್ರಾಮ ಪಂಚಾಯತ್ ಅಧಿಕಾರಿ, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳಿಗೆ ನೋಟಿಸ್ ಹಾಗೂ ಮಾಲಿನ್ಯ ನಿಯಂತ್ರಣ ಮಂಡಳಿ ಮಾಹಿತಿ ನೀಡಿದ್ದೆವು. ಇದೀಗ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಭೇಟಿ ನೀಡಿ, ಕಲುಷಿತ ನೀರು ಸೇರುತ್ತಿರುವ ಜಾಗಗಳಿಂದ ನೀರಿನ ಮಾದರಿ ಸಂಗ್ರಹಿಸಿದ್ದಾರೆ ಎಂದರು.

ಈ ವೇಳೆ ತಹಸೀಲ್ದಾರ್ ಶ್ರೀನಿವಾಸ್, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ರವಿಚಂದ್ರ, ಪುರಸಭೆ ಮುಖ್ಯಾಧಿಕಾರಿ ಸುರೇಶ್ , ತಾರಕ ಎಇಇ ನಟಶೇಖರ್ ಮೂರ್ತಿ ಸೇರಿದಂತೆ ಮಾಲಿನ್ಯ ನಿಯಂತ್ರಣ ಮಂಡಳಿಯ ಸಿಬ್ಬಂದಿ ಹಾಜರಿದ್ದರು.



# ಹೆಣ್ಣಿನ ಜೀವನವನ್ನು ಮರುರೂಪಿಸಿದ ಸುಧಮ್ಮನ ಕೃತಿ

■ ಉದಯರಶ್ಮಿ ದಿನಪತ್ರಿಕೆ

**ಇಂದು (19 ಆಗಸ್ಟ್ ಬುಧವಾರ) ಮಾನವೀಯತೆಯ ಬೆಳಕು ಹಂಚಿದ ಖ್ಯಾತ ಸಾಹಿತಿ ಹಾಗೂ ರಾಜ್ಯಸಭಾ ಸದಸ್ಯೆ ಡಾ.ಸುಧಾಮೂರ್ತಿ ಅವರ ಜನ್ಮದಿನದ ಪ್ರಯುಕ್ತ ಈ ವಿಶೇಷ ಲೇಖನ**



ಒಂದು ಸಾಹಿತ್ಯ ಕೃತಿ, ಒಂದು ಹೆಣ್ಣಿನ ಜೀವನವನ್ನೇ ಬದಲಾಯಿಸಿದ ಕಥೆಯಿದು. ಒಬ್ಬ ಸಹೃದಯಿ ಲೇಖಕಿಂ–ರು ಸಾಹಿತ್ಯಕ್ಕಿರುವ ಶಕ್ತಿ ಎಂಥದ್ದು ಎಂಬುದನ್ನು ತಿಳಿಸುವ ಮನಮುಟ್ಟುವ ಘಟನೆ ಇದು.

ಸುಧಾ ಮೂರ್ತಿಯವರು ಮಮತಾಮೂರ್ತಿ ಎಂಬುದು ಎಲ್ಲರಿಗೂ ಗೊತ್ತಿರುವ ಸಂಗತಿ. ಅವರು ಇನ್ಫೋಸಿಸ್ ಧರ್ಮದರ್ಶಿಯಾಗಿದ್ದ ಸಂದರ್ಭದಲ್ಲಿ ನಡೆದ ಒಂದು ಸತ್ಯ ಘಟನೆಯನ್ನು ತಮ್ಮ 'ಮನದ ಮಾತು' ಕೃತಿಯಲ್ಲಿ ಹಂಚಿಕೊಂಡಿದ್ದಾರೆ.

ಸಾಮಾನ್ಯವಾಗಿ ಯಾವುದೇ ಮದುವೆ ಸಮಾರಂಭಗಳಿಗೆ ಸುಧಾ ಮೂರ್ತಿಯವರು ಹೋಗುತ್ತಿರಲಿಲ್ಲ. ಆದರೆ ಒಂದು ದಿನ ಅವರ ಮುಂದೆ ಬಂದ ಸಾವಿರಾರು ಪತ್ರಗಳ ನಡುವೆ ಒಂದು ಮದುವೆಯ ಕರೆಯೋಲೆ ಇತ್ತು. ಆ ಕರೆಯೋಲೆಯ ಮೇಲೆ ಒಂದು ವಾಕ್ಯ ಸ್ಪಷ್ಟವಾಗಿ ಹೀಗೆ ಬರೆಯಲಾಗಿತ್ತು:



"ನೀವು ನಮ್ಮ ಮದುವೆಗೆ ಬರದಿದ್ದರೆ, ನಾವು ದುರದೃಷ್ಟವಂತರು ಎಂದು ಭಾವಿಸುತ್ತೇವೆ."


ಆ ಮದುವೆಯ ಕರೆಯೋಲೆಯನ್ನು ಕಳುಹಿಸಿದವರು ಯಾರು ಎಂಬುದೇ ಅವ–ರಿಗೆ ಹೊಳೆಯಲಿಲ್ಲ. ಎಷ್ಟೇ ಯೋಚಿಸಿದರೂ ಅವರು ಯಾರೆಂಬುದು ನೆನಪಾಗಲಿಲ್ಲ. ಕೊನೆಗೆ ತಮ್ಮ ತಂದೆಯ ಒತ್ತಾಯದ ಮೇರೆಗೆ ಆ ಮದುವೆಗೆ ಹೋಗಲು ಸುಧಾ ಮೂರ್ತಿಯವರು ಒಪ್ಪಿಕೊಂಡರು.

ಮದುವೆಯ ಮನೆಗೆ ಬಂದ ಮೇಲೂ ಆ ಮದುವೆ ಯಾರದು ಎಂಬುದು ಅವರಿಗೆ ತಿಳಿಯಲಿಲ್ಲ. "ಇದು ಯಾರ ಮದುವೆ? ನೀವು ನನಗೆ ಹೇಗೆ ಪರಿಚಯ?" ಎಂದು ಕೇಳಲು ಕೂಡ ಅವ–ರಿಗೆ ಮುಜುಗರವಾಯಿತು. ಮದುವೆಯ ಜೋಡಿಗೆ ಹಾರೈಸಿದರು. ಆದರೂ ತಮ್ಮನ್ನು ಆಹ್ವಾನಿಸಿದವರು ಯಾರೆಂಬ ಕುತೂಹಲ ಮಾತ್ರ ಉಳಿಯಿತು.

ಅಷ್ಟರಲ್ಲಿ ವಧುವಿನ ತಂದೆ–ತಾಯಿ ಅವರ ಬಳಿಗೆ ಬಂದು ಅವರನ್ನು ಊಟಕ್ಕೆ ಕರೆದುಕೊಂಡು ಹೋದರು. ಊಟಕ್ಕೆ ಕುಳಿತಾಗ ಅವರು ನಡೆದ ಸಂಗತಿಯನ್ನೆಲ್ಲ ಸುಧಾ ಮೂರ್ತಿಯವರಿಗೆ ವಿವ–ರಿಸಿದರು.

ಆ ಮದುವೆಯ ವಧು–ವರರು ಮಾಲತಿ ಮತ್ತು ಮಧು. ಇಬ್ಬರೂ ಎಂಜಿನಿಯರಿಂಗ್ ವಿದ್ಯಾರ್ಥಿಗಳು. ಅವರ ನಿಶ್ಚಿತಾರ್ಥ–ವೂ ಆಗಿತ್ತು. ಮಧು ದುಬೈಯಲ್ಲಿ ಕೆಲಸ ಮಾಡುತ್ತಿದ್ದರೆ, ಮಾಲತಿ ಇಲ್ಲಿಯೇ ಖಾಸಗಿ ಕಂಪನಿಯೊಂದರಲ್ಲಿ ಕೆಲಸ ಮಾಡುತ್ತಿದ್ದಳು.

ನಿಶ್ಚಿತಾರ್ಥದ ನಂತರ ಮಧು ದುಬೈಗೆ ತೆರಳಿದ್ದ. ಕೆಲವು ತಿಂಗಳುಗಳ ಬಳಿಕ ಭಾರತಕ್ಕೆ ಮರಳಿದಾಗ ಮಾಲತಿಯ ಕೈ ಮೇಲೆ ಬಿಳಿ ಮಚ್ಚೆಯೊಂದು ಕಾಣಿಸಿಕೊಂಡಿತು. ಅದನ್ನು ಕಂಡ ಮಧು ಮದುವೆಯಾಗಲು ನಿರಾಕರಿಸಿ ಮತ್ತೆ ದುಬೈಗೆ ತೆರಳಿದ.



ನಿಶ್ಚಿತಾರ್ಥವಾಗಿ ಒಂದು ವರ್ಷ ಕಳೆದಿತ್ತು. ಹೀಗೆ ಮದುವೆಯ ಹೊತ್ತಿನಲ್ಲಿ ಹುಡುಗ ಕೈಬಿಟ್ಟರೆ ಆ ಹುಡುಗಿಯ ಜೀವನದ ಸ್ಥಿತಿ ಏನಾಗಬೇಕು? ಮಾಲತಿ ಮತ್ತು ಆಕೆಯ ತಂದೆ–ತಾಯಿಯ ದುಃಖಕ್ಕೆ ಮಿತಿಯೇ ಇರಲಿಲ್ಲ.

ಆದರೆ ಮಧು ದುಬೈಗೆ ಹೋದ ಮೂರು ತಿಂಗಳ ನಂತರ ಒಂದು ಪತ್ರ ಬಂತು.

"ನಾನು ನಿನ್ನನ್ನು ಮದುವೆಯಾಗುತ್ತೇನೆ. ಯಾವ ಆತಂಕವೂ ಬೇಡ."

ಈ ಮಾತು ಮಾಲತಿಯ ಬದುಕಿನಲ್ಲಿ ಮತ್ತೆ ಭರವಸೆಯ ಬೆಳಕನ್ನು ಮೂಡಿಸಿತು.

ಹಾಗಾದರೆ, ಮಧುವಿನ ಮನಸ್ಸನ್ನು ಬದಲಿಸಿದ್ದು ಏನು?

ಮಾಲತಿಯನ್ನು ನಿರಾಕರಿಸಿ ದುಬೈಗೆ ತೆರಳುವಾಗ ಮಧು ಸುಧಾ ಮೂರ್ತಿಯವರ 'ಮಹಾಶ್ವೇತೆ' ಕಾದಂಬರಿಯನ್ನು ಖರೀದಿಸಿ ತನ್ನೊಂದಿಗೆ ತೆಗೆದುಕೊಂಡು ಹೋಗಿದ್ದ.

ಆ ಕಾದಂಬರಿಯ ನಾಯಕಿ ಅನುಪಮಾ ಎದುರಿಸುವ ಬಿಳುಪು ರೋಗದ ಕಾರಣವಾದ ಸಾಮಾಜಿಕ ನೋವು, ಅವಮಾನ, ಏಕಾಂತ ಮತ್ತು ಆಕೆಯ ಪತಿಯ ಮನಸ್ಸಿನಲ್ಲಿ ಮೂಡುವ ಪಶ್ಚಾತ್ತಾಪ ಇವೆಲ್ಲವನ್ನೂ ಓದುತ್ತಾ ಮಧುವಿಗೆ ತನ್ನ ತಪ್ಪಿನ ಅರಿವಾಯಿತು.

ತಾನು ಅನುಪಮಾಳ ಪತಿಯಂತೆ ತಪ್ಪು ಮಾಡಬಾರದು ಎಂದು ಆತ ನಿರ್ಧರಿಸಿದ. ತನ್ನ ನಿರ್ಧಾರವನ್ನು ಬದಲಿಸಿಕೊಂಡು ಮಾಲತಿಯನ್ನು ಮದುವೆಯಾಗಲು ಒಪ್ಪಿಕೊಂಡ.

ಹೀಗೆ ಒಂದು ಸಾಹಿತ್ಯ ಕೃತಿ ಒಂದು ಬದುಕನ್ನು ನಿರ್ಮಿಸಿತು. ಒಂದು ತಪ್ಪು ನಿರ್ಧಾರದಿಂದ ಒಂದು ಬದುಕು ಒಡೆಯುವುದನ್ನು ತಡೆಯಿತು. ಒಬ್ಬ ಮನುಷ್ಯನ ಮನಸ್ಸನ್ನು ಬದಲಿಸಿ, ಒಬ್ಬ ಹೆಣ್ಣಿನ ಭವಿಷ್ಯಕ್ಕೆ ಹೊಸ ಅರ್ಥ ನೀಡಿತು.

ಒಂದು ಕೃತಿ ಬದುಕನ್ನು ಬದಲಾಯಿಸಬಲ್ಲದು ಎಂದಾದರೆ, ಅಕ್ಷರದ ಶಕ್ತಿ ಎಷ್ಟಿರಬೇಕು!

ತಮ್ಮ ಒಂದು ಕೃತಿ ಈ ಹೆಣ್ಣಿನ ಬದುಕನ್ನು ಮರುರೂಪಿಸಲು ಕಾರಣವಾಯಿತು ಎಂಬ ಸಂತೋಷದೊಂದಿಗೆ ಸುಧಾ ಮೂರ್ತಿಯವರು ಆ ಮನೆಯಿಂದ ಹೊರಟ–ರು ಎನ್ನುವುದು ಈ ಘಟನೆಯ ಅತ್ಯಂತ ಭಾವನಾತ್ಮಕ ಭಾಗ.


ಸುಧಾ ಮೂರ್ತಿಯವರ 'ಮನದ ಮಾತು' ಕೃತಿಯಲ್ಲಿ ಅವರು ಹಂಚಿಕೊಂಡಿರುವ ಈ ಘಟನೆ, ಸಾಹಿತ್ಯದ ನಿಜವಾದ ಶಕ್ತಿ ಏನೆಂಬುದನ್ನು ನಮಗೆ ನೆನಪಿಸುತ್ತದೆ.

ಬರಹ ಕೇವಲ ಮನರಂಜನೆಗಾಗಿ ಅಲ್ಲ.
ಅದು ಮನಸ್ಸನ್ನು ತಟ್ಟಬಹುದು.
ತಪ್ಪು ನಿರ್ಧಾರವನ್ನು ಬದಲಿಸಬಹುದು.
ಒಡೆದ ಬದುಕಿಗೆ ಭರವಸೆ ನೀಡಬಹುದು.
ಒಬ್ಬರ ಬದುಕಿನ ದಿಕ್ಕನ್ನೇ ಬದಲಿಸಬಹುದು.
ಅದೇ ಒಳ್ಳೆಯ ಸಾಹಿತ್ಯದ ಶಕ್ತಿ.

ನಾಳೆ ಸಹೃದಯಿ, ಸರಳತೆ ಮತ್ತು ಮಾನವೀಯತೆಯ ಪ್ರತೀಕವಾಗಿರುವ ಸುಧಾ ಮೂರ್ತಿಯವರ ಜನ್ಮದಿನ.

ಅಕ್ಷರಗಳ ಮೂಲಕ ಸಾವಿರಾರು ಮನಸ್ಸುಗಳನ್ನು ಮುಟ್ಟಿದ, ತಮ್ಮ ಬರಹದ ಮೂಲಕ ಮಾನವೀಯತೆಯ ಬೆಳಕನ್ನು ಹಂಚಿದ ಈ ಮಾತೃಸ್ವರೂಪಿ ಲೇಖಕಿಗೆ ಮುಂಗಡವಾಗಿ ಹೃದಯಪೂರ್ವಕ ಜನ್ಮದಿನದ ಶುಭಾಶಯಗಳು.

ಅವರ ಅಕ್ಷರಯಾನ ಹೀಗೆಯೇ ನಿರಂತರವಾಗಿರಲಿ.
ಇನ್ನಷ್ಟು ಬದುಕುಗಳಿಗೆ ಅವರ ಸಾಹಿತ್ಯ ಬೆಳಕಾಗಲಿ.




ಲೇಖನ
■ ಡಾ.ರಾಜಶೇಖರ ನಾಗೂರ.
ಸಂಚಾಲಕರು
'ನಮ್ಮ ಕಥಾ ಅರಮನೆ'



## ಮಾದಕ ವ್ಯಸನಗಳ ಚಟ, ಅವಗುಣಗಳಿಗೆ ವಶವಾಗದಿರಿ

### ನಿಡಗುಂದಿ ಓಂ ಶಾಂತಿ ಶಾಖೆಯ ಬ್ರಹ್ಮಕುಮಾರಿ ಬಿ.ಕೆ. ರೇಣುಕಾ ಅವರಿಂದ ಮಕ್ಕಳಿಗೆ ಸಲಹೆ




■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ಸ್ವಾಸ್ಥ್ಯಭರಿತ ನಾಗರಿಕ ಸಮಾಜ ನಿಮಾ9ಣಕ್ಕೆ ಯುವಜನತೆ ಮುಂದಾಗಬೇಕು.ತಮ್ಮ ಮನಸಿನ ಆಮಲು ಮತ್ತೇರಿಸುವ ಚಟಾದಿಗಳ ಮೋಹದ ಪ್ರಬಲತೆಯನ್ನು ದಿಟ್ಟತೆಯ ಸ್ವಸ್ಥತೆಯಿಂದ ನಿಯಂತ್ರಿಸಬೇಕು. ಶುಭ್ರ, ಶುದ್ಧತೆವುಳ್ಳ ವ್ಯಕ್ತಿತ್ವ ತಮ್ಮದಾಗಿಸಿಕೊಂಡು ಸಾಗಬೇಕು. ಮಾದಕ ವ್ಯಸನದ ಚಟಗಳಿಗೆ ಅಂಟಿಕೊಳ್ಳದೇ, ಅವಗುಣಗಳಿಗೆ ವಶವಾಗದೇ ದೈಹಿಕ ಹಾಗೂ ಮಾನಸಿಕ ಉತ್ತಮ ಆರೋಗ್ಯ ಕಾಯ್ದುಕೊಳ್ಳುವ ಮೂಲಕ ಬದುಕಿನ ಚೈತ್ರ ಪಥ ಸಾರ್ಥಕ ಪಡಿಸಿಕೊಳ್ಳಬೇಕು ಎಂದು ನಿಡಗುಂದಿ ಓಂ ಶಾಂತಿ ಶಾಖೆಯ ಬ್ರಹ್ಮಕುಮಾರಿ ಬಿ.ಕೆ.ರೇಣುಕಾ ಹೇಳಿದರು.

ಇಲ್ಲಿನ ರಾವಬಹದ್ದೂರ ಡಾ.ಫ.ಗು.ಹಳಕಟ್ಟಿ (ಆರ್.ಬಿ.ಪಿ.ಜಿ) ಪ್ರೌಢಶಾಲೆಯಲ್ಲಿ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರಿ ವಿಶ್ವವಿದ್ಯಾಲಯ ನಿಡಗುಂದಿ ಶಾಖಾ ಆಶ್ರಮದ ವತಿಯಿಂದ ಹಮ್ಮಿಕೊಂಡಿದ್ದ 10 ಕೋಟಿ ನಶೆ ಮುಕ್ತ ಮಹಾ ಅಭಿಯಾನದ ಜಾಗೃತಿ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿದ ಅವರು, ಇಂದಿನ ಯುವಜನಾಂಗದಲ್ಲಿ ಮಾದಕ ದ್ರವ್ಯದ ಬಳಕೆಯು ಹೆಚ್ಚಾಗುತ್ತಲಿದೆ.

ಪರಿಣಾಮ ಸಾಮಾಜಿಕ, ಮಾನಸಿಕ, ದೈಹಿಕ ಸಮಸ್ಯೆಗಳು ತೀವ್ರಗೊಳ್ಳುತ್ತಲಿವೆ. ನಶೆವೆಂಬ ಚಟ ಕುಟುಂಬ ಹಾಗೂ ಸಮಾಜದ ಸ್ವಾಸ್ಥ್ಯಕ್ಕೆ ಮಾರಕವಾಗಿದೆ ಎಂದರು.

ಡ್ರಗ್ಸ್ ಪಿಡುಗು ಯುವ ಜನತೆಯ ಮನಸ್ಥಿತಿಗೆ ಕಂಟಕವಾಗಿದೆ.ಅವರನ್ನುದಾರಿತಪ್ಪಿಸಿಕೆಂಗಡಿಸುತ್ತಿದೆ. ಜೀವನ ತಲ್ಲಣಗೊಳಿಸುತ್ತಿದೆ. ಕಂಡ ಕನಸುಗಳನ್ನು ನೊಚ್ಚು ನೂರು ಮಾಡಿ ನೆಮ್ಮದಿ, ಆಥಿ9ಕ ಸ್ಥಿತಿ ಹದಗೆಡಿಸುತ್ತಿದೆ ಅಲ್ಲದೇ ಅಪರಾಧ ಚಟುವಟಿ–ಕೆಗಳಿಗೆ ನುಗ್ಗುವಂತೆ ಉತ್ತೇಜಿಸುತ್ತಿದೆ. ಕಾರಣ ಮಾದಕ ವಸ್ತುಗಳ ಮೋಹಕ್ಕೆ ಪ್ರಭಾವಿತರಾಗಬೇಡಿ. ಸೇವನೆಗೆ ಒಳಗಾದರೆ ಹಾನಿಕರ ಪರಿಣಾಮಗಳನ್ನು ಎದುರಿಸಬೇಕಾದೀತು. ದುಶ್ಚಟಗಳನ್ನು ಬದಿಗೊತ್ತಿ ಆರೋಗ್ಯಕರ ಅಭ್ಯಾಸಗಳು ರೂಢಿಸಿಕೊಳ್ಳಬೇಕು. ಜವಾಬ್ದಾರಿಯುತ ನಿಲುವುಗಳೊಂದಿಗೆ ಮೊದಲು ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಲು ದೃಢ ಸಂಕಲ್ಪಕ್ಕೆ ಮುಂದಾಗಬೇಕು ಎಂದು ಬ್ರಹ್ಮಾಕುಮಾರಿ ರೇಣುಕಾ ನುಡಿದರು.

ಈ ನಶಾ ಮುಕ್ತ ಮಹಾ ಅಭಿಯಾನವು ಯುವಜನತೆಯನ್ನು ದುಶ್ಚಟಗಳಿಂದ ಮುಕ್ತಗೊಳಿಸಿ ರಕ್ಷಿಸುವ ಮಹೋನ್ನತ ಜಾಗೃತಿ ಕಾರ್ಯಕ್ರಮವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಎಸ್.ಎಚ್.ನಾಗಣಿ, ಆರ್.ಎಂ.ರಾಠೋಡ, ಬಸವರಾಜ ಹಡಪದ, ಗುಲಾಬಚಂದ ಜಾಧವ, ಕರುಣಿಕ ಸಚೀನ ಹೆಬ್ಬಾಳ, ಓಂ ಶಾಂತಿ ನಿಡಗುಂದಿ ಆಶ್ರಮದ ವಿಜಯಲಕ್ಷ್ಮೀ ಮುಚ್ಚಂಡಿ ಇತರರಿದ್ದರು.

## ಹತಗುಂದಾ ಶಾಲೆಯಲ್ಲಿ ಸ್ವಾತಂತ್ರ್ಯ ದಿನಾಚರಣೆ, ಶನಿವಾರ ಸಂಭ್ರಮ

ಕಲಬುರಗಿ: ತಾಲ್ಲೂಕಿನ ಹತಗುಂದಾ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲಾಯಿತು.

ಮಹಾತ್ಮ ಗಾಂಧೀಜಿ, ಡಾ.ಬಿ.ಆರ್. ಅಂಬೇಡ್ಕರ್, ಸಂಗೊಳ್ಳಿ ರಾಯಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದರ ಮೂಲಕ ಶಾಲೆಯ ಮುಖ್ಯಗುರುಗಳಾದ ದೇವಿಂದ್ರಪ್ಪ ಗಣಮುಖಿ ಅವರು ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಎಕೆಡಿಬಿಯಿಂದ 2022–2023 ರಲ್ಲಿ 4 ಶಾಲಾ ಕೋಣೆಗಳನ್ನು ಉದ್ಘಾಟಿಸಿ ಬಳಕೆ ಮಾಡದೆ ಹಾಗೇ ಬಿಟ್ಟಿದ್ದ ಪ್ರಯುಕ್ತ ಈ 4 ಕೋಣೆಗಳಿಗೆ ಸುಣ್ಣ–ಬಣ್ಣ ಬಳಿದು ಮುಖ್ಯಗುರುಗಳ ಕಾರ್ಯಾಲಯ, ಗ್ರಂಥಾಲಯ, 2 ಬೋಧನಾ ಕೋಣೆಗಳನ್ನಾಗಿ ಬಳಕೆ ಮಾಡಲಾಗುತ್ತಿದೆ. ಶಾಲಾ ಅನುದಾನದಲ್ಲಿ ಧ್ವಜಕಟ್ಟೆ, ಧ್ವನಿವರ್ಧಕ, ಇನ್ನಿತರ ಸಾಮಗ್ರಿಗಳನ್ನು ಖರೀದಿಸಲಾಗಿದೆ ಎಂದು ತಿಳಿಸಿದರು.

ಪಟ್ಟಣ ಗ್ರಾಮ ಪಂಚಾಯತ ಅಧ್ಯಕ್ಷರಾದ ಪಾರ್ವತಿ ಓಗೆ, ಶಾಲಾ ಶಿಕ್ಷಕರಾದ ಶಾಂತಾಬಾಯಿ, ಅಕ್ತರ್ ಸಿರೀನ್, ಮಹೇಶ್ ದೇಶಮುಖ, ಗಾರ್ಡನರ್ ಕೀರ್ತಿ ಓಗೆ, ಬಿಸಿಯೂಟ ಸಿಬ್ಬಂದಿಗಳು, ಪಾಲಕರು, ಪೋಷಕರು, ಹಳೆಯ ವಿದ್ಯಾರ್ಥಿಗಳು, ಗ್ರಾಮಸ್ಥರು ಉಪಸ್ಥಿತರಿದ್ದರು.

## ಸುಸ್ಥಿರ, ಆರೋಗ್ಯಯುತ ಭಾರತಕ್ಕಾಗಿ ಕಂಕಣಬದ್ಧರಾಗಿ

### ಬ್ರಹ್ಮಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದ ಬಿ.ಕೆ.ಶೈಲಾ ಅಭಿಮತ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ದೇಶದ ಭವಿಷ್ಯವಾಗಿರುವ ಯುವ ಸಮೂಹವನ್ನು ಮಾದಕ ವಸ್ತುಗಳ ವ್ಯಸನದಿಂದ ದೂರಾಗಿಸಲು ಮತ್ತು ಸುಸ್ಥಿರ ಮತ್ತು ಆರೋಗ್ಯಯುತ ಸಮಾಜವನ್ನು ನಿರ್ಮಿಸಲು ನಶಾ ಮುಕ್ತ ಭಾರತ ಅಭಿಯಾನ ರಾಷ್ಟ್ರೀಯ ಆಂದೋಲನವಾಗಿದೆ ಎಂದು ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಬಿ.ಕೆ.ಶೈಲಾ ಅವರು ಅಭಿಪ್ರಾಯಪಟ್ಟರು.

ಅವರು ನಗರದ ಅಥಣಿ ರಸ್ತೆಯಲ್ಲಿರುವ ಅಲ್–ಅಮೀನ್ ಆಸ್ಪತ್ರೆಯ ಎದುರಿಗೆ ಇರುವ ಎನ್.ಜಿ.ಓ. ಕಾಲನಿಯ ಆಂಜನೇಯ ದೇವಸ್ಥಾನದಲ್ಲಿ ನಶಾ ಮುಕ್ತ ಭಾರತ ಅಭಿಯಾನದಲ್ಲಿ ಅವರು ಮಾತನಾಡುತ್ತಿದ್ದರು.

ನಶಾ ಮುಕ್ತ ಭಾರತ ಅಭಿಯಾನವು ಕೇವಲ ಸರ್ಕಾರದ ಜವಾಬ್ದಾರಿಯಲ್ಲ. ಇದು ಪ್ರತಿಯೊಬ್ಬ ನಾಗರೀಕರ ಕರ್ತವ್ಯ. ಸಮಾಜದಿಂದ ಮದ್ಯ ಮತ್ತು ಮಾದಕ ವ್ಯಸನವನ್ನು ಸಂಪೂರ್ಣವಾಗಿ ತೊಡೆದು ಹಾಕಿದರೆ ಮಾತ್ರ ದೇಶವು ಆರ್ಥಿಕವಾಗಿ ಮತ್ತು ಬೌದ್ಧಿಕವಾಗಿ ಪ್ರಗತಿ ಸಾಧಿಸಲು ಸಾಧ್ಯ. ಇಂದು ಯುವ ಜನತೆ ಮತ್ತು ಸಾರ್ವಜನಿಕರಲ್ಲಿ ಮಾದಕ ದ್ರವ್ಯಗಳ ಬಳಕೆಯಿಂದ ಉಂಟಾಗುವ ದುಷ್ಪ–ರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಬೇಕಾಗಿದೆ. ಸರ್ಕಾರ, ಸರ್ಕಾರೇತರ, ಸಂಘ–ಸಂಸ್ಥೆಗಳ ಸಹಭಾಗಿತ್ವದಲ್ಲಿ ಡ್ರಗ್ಸ್ ಮುಕ್ತ ಪರಿಸರ ನಿರ್ಮಿಸುವುದು ಅಗತ್ಯವಾಗಿದೆ ಎಂದರು.

ನಂತರ ನಶಾ ಮುಕ್ತ ಭಾರತಕ್ಕಾಗಿ ಎಲ್ಲರಿಗೆ ಪ್ರತಿಜ್ಞಾವಿಧಿ ಬೋಧಿಸಲಾಯಿತು.

ಈ ಕಾರ್ಯಕ್ರಮದಲ್ಲಿ ದೇವಸ್ಥಾನದ ಅಧ್ಯಕ್ಷ ಸಂತೋಷ ಪಾಟೀಲ, ಬಿ.ಆರ್.ಬಿರಾದಾರ, ಎಸ್.ಜಿ.ನಿಂಗನಗೌಡ್ರ, ಪ್ರೊ. ಎಂ.ಎಸ್.ಖೊದ್ನಾಪೂರ, ಶ್ರೀರಾಮ ದೇಶಪಾಂಡೆ, ರಮೇಶ ಕುಮಟಗಿ, ಡಾ. ಹೃಷಿಕೇಶ ಪಾಟೀಲ, ಬಿ.ಕೆ. ವೈಶಾಲಿ, ಬಿ.ಕೆ. ಕಲ್ಯಾಣಿ, ಪ್ರೊ. ಎಂ.ಆರ್.ಜೋಶಿ, ಶಿವಾನಂದ ಬಿಜ್ಜರಗಿ, ಡಾ. ಆನಂದ ದೈಗೊಂಡ, ಪ್ರಕಾಶ ಗೋಂಧಳಿ ಇನ್ನಿತರರು ಸಹ ಉಪಸ್ಥಿತರಿದ್ದರು.

ಈ ಅಭಿಯಾನದಲ್ಲಿ ಸುತ್ತಮುತ್ತಲಿನ ಕಾಲನಿಗಳ ಮಹಿಳೆಯರು, ಮಕ್ಕಳು, ಯುವಕರು ಸೇರಿದಂತೆ 100 ಕ್ಕೂ ಹೆಚ್ಚು ಜನರು ಪಾಲ್ಗೊಂಡಿದ್ದರು.

## ಜಾಬ್ ಕಾರ್ಡ್ ಮೇಳಕ್ಕೆ ತಾಪಂ ಇಓ ಅನಸೂಯಾ ಚಾಲನೆ

■ ಉದಯರಶ್ಮಿ ದಿನಪತ್ರಿಕೆ




ತಾಳಿಕೋಟೆ: ಗ್ರಾಮೀಣ ಪ್ರದೇಶದ ಜನರಿಗೆ ಸ್ಥಳೀಯವಾಗಿಯೇ ಅಕುಶಲ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ವಿಕಸಿತ ಭಾರತ ಉದ್ಯೋಗ ಖಾತರಿ ಹಾಗೂ ಜೀವನೋಪಾಯ ಅಭಿಯಾನ (ಗ್ರಾಮೀಣ) (ವಿಬಿ–ಜಿರಾಮ್–ಜಿ) ಯೋಜನೆಯಡಿ ಆಗಸ್ಟ್ 15ರಿಂದ ಸೆಪ್ಟೆಂಬರ್ 15ರವರೆಗೆ ತಾಲೂಕಿನ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಜಾಬ್ ಕಾರ್ಡ್ ಮೇಳ ಹಮ್ಮಿಕೊಳ್ಳಲಾಗಿದೆ ಎಂದು ತಾಳಿಕೋಟೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಮತಿ ಅನುಸೂಯಾ ಚಲವಾದಿ ಹೇಳಿದರು.

> "ಗ್ರಾಮೀಣ ಜನರಿಗೆ ಸ್ವಗ್ರಾಮದಲ್ಲಿಯೇ ಉದ್ಯೋಗ ಒದಗಿಸಿ, ಆರ್ಥಿಕ ಸ್ವಾವಲಂಬನೆ ಹಾಗೂ ಜೀವನೋಪಾಯ ಭದ್ರತೆ ಕಲ್ಪಿಸುವ ನಿಟ್ಟಿನಲ್ಲಿ ಜಾಬ್ ಕಾರ್ಡ್ ಮೇಳ ಮಹತ್ವದ ಹೆಜ್ಜೆಯಾಗಿದೆ."
>
> ■ ಶ್ರೀಮತಿ ಅನುಸೂಯಾ ಚಲವಾದಿ
> ತಾಪಂ ಇಓ, ತಾಳಿಕೋಟೆ

**70 ಜನರಿಂದ ಅರ್ಜಿ ಜಾಬ್ ಕಾರ್ಡ್**

ಮೇಳದಲ್ಲಿ 30 ಜನರು ಹೊಸ ಉದ್ಯೋಗ ಚೀಟಿಗಾಗಿ ಅರ್ಜಿ ಸಲ್ಲಿಸಿದರೆ, 40 ಜನರು ಕೂಲಿ ಕೆಲಸಕ್ಕಾಗಿ ಬೇಡಿಕೆ ಸಲ್ಲಿಸಿದರು. ಇದರಿಂದ ಗ್ರಾಮೀಣ ಜನರಲ್ಲಿ ಯೋಜನೆಯ ಕುರಿತು ಉತ್ತಮ ಸ್ಪಂದನೆ ವ್ಯಕ್ತವಾಯಿತು.

ಅವರು ತಾಲೂಕಿನ ಬ.ಸಾಲವಡಗಿ ಗ್ರಾಮ ಪಂಚಾಯಿತಿಯಲ್ಲಿ ಜಾಬ್ ಕಾರ್ಡ್ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದರು. ಪ್ರಸ್ತುತ ಬರ ಪರಿಸ್ಥಿತಿಯಿಂದ ಗ್ರಾಮೀಣ ಪ್ರದೇಶದಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಕೃಷಿ ಚಟುವಟಿಕೆಗಳು ನಡೆಯದೆ, ಸ್ಥಳೀಯ ಉದ್ಯೋಗಾವಕಾಶಗಳು ಕಡಿಮೆಯಾಗಿವೆ. ಇದ–ರಿಂದ ಗ್ರಾಮೀಣ ಜನರ ಜೀವನೋಪಾಯದ ಮೇಲೆ ವ್ಯತಿ–ರಿಕ್ತ ಪರಿಣಾಮ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ವಿಬಿ–ಜಿರಾಮ್–ಜಿ ಯೋಜನೆಯಡಿ ಅರ್ಹ ಗ್ರಾಮೀಣ ಜನರಿಗೆ ಸ್ವಗ್ರಾಮದಲ್ಲಿಯೇ ಉದ್ಯೋಗಾವಕಾಶ ಕಲ್ಪಿಸಿ, ಕೆಲಸಕ್ಕಾಗಿ ನಗರ ಪ್ರದೇಶಗಳಿಗೆ ವಲಸೆ ಹೋಗುವುದನ್ನು ತಡೆಯುವ ಉದ್ದೇಶದಿಂದ ಜಾಬ್ ಕಾರ್ಡ್ ನೀಡಲಾಗುತ್ತಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಸಹಾಯಕ ನಿರ್ದೇಶಕರು (ಗ್ರಾ.ಉ) ಪಿ.ಎಸ್. ಕಸನಕ್ಕಿ ಮಾತನಾಡಿ, ಜಾಬ್ ಕಾರ್ಡ್ ಮೇಳದ ಮೂಲಕ ಗ್ರಾಮೀಣ ಜನರ ಭಾಗವಹಿಸುವಿಕೆಯನ್ನು ಹೆಚ್ಚಿಸುವುದು, ಯೋಜನೆಯಡಿ ಲಭ್ಯವಿರುವ ಅಕುಶಲ ಕೆಲಸಗಳು ಹಾಗೂ ವೈಯಕ್ತಿಕ ಸೌಲಭ್ಯಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸುವುದು ಪ್ರಮುಖ ಉದ್ದೇಶವಾಗಿದೆ ಎಂದ ಅವರು ಜೀವನೋಪಾಯ ಭದ್ರತೆಗಾಗಿ ಉದ್ಯೋಗ ಸೃಜನೆ, ಬರ ನಿರ್ವಹಣೆ, ಮೂಲಸೌಕರ್ಯ ಅಭಿವೃದ್ಧಿ ಕಾಮಗಾ–ರಿಗಳ ಅನುಷ್ಠಾನ ಹಾಗೂ ಕೂಲಿಕಾರರ ವಲಸೆ ತಡೆಯುವ ನಿಟ್ಟಿನಲ್ಲಿ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುವುದು ಎಂದು ತಿಳಿಸಿದರು.

# ಜಾತಿ ಆಧಾರಿತ ಭೇದ ಭಾವ ಸಹಿಸಲಾಗದು : ಗುಡಿಮನಿ

■ ಉದಯರಶ್ಮಿ ದಿನಪತ್ರಿಕೆ



ಕೆಂಭಾವಿ: ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಉತ್ತರಖಂಡದ ರಾಮ್ ಲೀಲಾ ಮೈದಾನದ ಕಾರ್ಯಕ್ರಮದಲ್ಲಿ ಭಾಗವಹಿಸಿ ತೆರಳಿದ ನಂತರ, ಅವರು ಕುಳಿತಿದ್ದ ಮತ್ತು ಕಾರ್ಯಕ್ರಮ ನಡೆಸಿದ ಸ್ಥಳವನ್ನು ಸ್ವಚ್ಛಗೊಳಿಸಿರುವುದು ಅತ್ಯಂತ ಅವಮಾನಕರ ಸಂಗತಿಯಾಗಿದೆ ಎಂದು ಕೆಂಭಾವಿ ಬ್ಲಾಕ್ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷ ವಿರುಪಾಕ್ಷ ಗುಡಿಮನಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ದೇಶದ ಹಿರಿಯ ರಾಜಕೀಯ ನಾಯಕ ಹಾಗೂ ದಲಿತ ಸಮುದಾಯದ ಪ್ರತಿನಿಧಿಯಾಗಿರುವ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಇಂತಹ ಅವಮಾನ ಮಾಡಿರುವುದು ಖಂಡನೀಯ ಎಂದಿದ್ದಾರೆ. ಜಾತಿ ಆಧಾರಿತ ಭೇದಭಾವ ಮತ್ತು ಅಸ್ಪೃಶ್ಯತೆಯ ಮನೋಭಾವವನ್ನು ಯಾವುದೇ ಕಾರಣಕ್ಕೂ ಸಹಿಸಲಾಗದು.

ಸಂವಿಧಾನವು ಎಲ್ಲ ನಾಗರಿಕರಿಗೂ ಸಮಾನತೆ, ಸ್ವಾಭಿಮಾನ ಮತ್ತು ಗೌರವದ ಹಕ್ಕನ್ನು ನೀಡಿದೆ. ಆದರೆ, ಒಬ್ಬ ಪ್ರಮುಖ ನಾಯಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ ನಂತರ ಸ್ಥಳವನ್ನು ಶುದ್ಧೀಕರಿಸಿರುವ ಘಟನೆ ನಿಜವಾಗಿದ್ದರೆ, ಇದು ಸಂವಿಧಾನದ ಆಶಯಗಳಿಗೆ ಹಾಗೂ ಸಾಮಾಜಿಕ ನ್ಯಾಯದ ಮೌಲ್ಯಗಳಿಗೆ ವಿರುದ್ಧವಾಗಿದೆ ಎಂದು ಗುಡಿಮನಿ ಹೇಳಿದ್ದಾರೆ.

ಘಟನೆಯ ಕುರಿತು ಸಂಬಂಧಿಸಿದ ಅಧಿಕಾರಿಗಳು ತಕ್ಷಣ ತನಿಖೆ ನಡೆಸಬೇಕು. ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಂಡು, ಇಂತಹ ಘಟನೆಗಳು ಮರುಕಳಿಸದಂತೆ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಸಾಮಾಜಿಕ ಸಮಾನತೆ ಮತ್ತು ಮಾನವೀಯ ಗೌರವಕ್ಕಾಗಿ ಕಾಂಗ್ರೆಸ್ ಪಕ್ಷ ನಿರಂತರವಾಗಿ ಹೋರಾಟ ನಡೆಸುತ್ತಿದೆ. ಜಾತಿ, ಧರ್ಮ ಮತ್ತು ವರ್ಗದ ಹೆಸರಿನಲ್ಲಿ ನಡೆಯುವ ಯಾವುದೇ ರೀತಿಯ ಅವಮಾನಕಾರಿ ಕೃತ್ಯಗಳ ವಿರುದ್ಧ ಎಲ್ಲರೂ ಒಗ್ಗಟ್ಟಾಗಿ ಧ್ವನಿ ಎತ್ತಬೇಕು ಎಂದು ತಮ್ಮ ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಸೆ.4–5 ರಂದು ಕೃಷ್ಣ–ವಾದಿರಾಜ ಮಠದಲ್ಲಿ ಕೃಷ್ಣ ಜನ್ಮಾಷ್ಟಮಿ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಕೃಷ್ಣ–ವಾದಿರಾಜ ಮಠದಲ್ಲಿ ಸೆಪ್ಟೆಂಬರ 4–5 ರಂದು ಕೃಷ್ಣ ಜನ್ಮಾಷ್ಟಮಿಯನ್ನು ಆಚರಿಸಲಾಗುವದೆಂದು ಶ್ರೀಮಠದ ವಿಜಯಪುರ ಶಾಖೆಯ ಗೌರವಾಧ್ಯಕ್ಷ ಗೋಪಾಲ ನಾಯಕ ಹೇಳಿದರು.

ಭಕ್ತರ ಸಂಭ್ರಮ ಸಡಗರ ಮಧ್ಯ ಆಮಂತ್ರಣ ಪತ್ರಿಕೆ ಬಿಡುಗಡೆ ಮಾಡಿದ ಸಂದರ್ಭದಲ್ಲಿ ಮಾತನಾಡಿದ ಅವರು ದಿನಾಂಕ 4 ರಂದು ಶ್ರೀ ಕೃಷ್ಣ ದೇವರಿಗೆ ಲಕ್ಷ ತುಳಸಿ ಅರ್ಪಣೆ , ಮಹಿಳಾ ಮಂಡಳಿಗಳಿಂದ ಅಖಂಡ ಭಜನೆ ಮರು ದಿನ ಪಂಚಾಮೃತ ಅಭಿಷೇಕ ಪೂಜೆ ನೈವೇದ್ಯ ಮತ್ತು ಪ್ರಸಾದ ವಿತರಣೆ ನಡೆಯುತ್ತವೆ ಎಂದು ಹೇಳಿದರು.

ಶ್ರೀಗಳ ಆದೇಶದ ಮೇರೆಗೆ ಶ್ರೀಮಠದ ಆವರಣದಲ್ಲಿದ್ದ ವಿದ್ಯಾರ್ಥಿ ನಿಲಯದ ಹಳೆ ಕಟ್ಟಡ ತೆರವುಗೊಳಿಸಿ ಆಧುನಿಕ ನೂತನ ಕಟ್ಟಡ ನಿರ್ಮಾಣ ಮಾಡುವ ಕೆಲಸ ವೇಗದಿಂದ ನಡೆದಿದೆ. ಅಂದಾಜು ರೂ. 7 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುವ ಕಟ್ಟಡಕ್ಕೆ ಅನೇಕ ಭಕ್ತರು ದೇಣಿಗೆ ನಿಡುತ್ತಿದ್ದಾರೆ. ಭಕ್ತಾದಿಗಳು ಇನ್ನಷ್ಟು ದೇಣಿಗೆ ನೀಡಲು ಮುಂದೆ ಬರಲು ಕರೆ ನೀಡಿದರು.

ಪ್ರಕಾಶ ಅಕ್ಕಲಕೋಟ ಮಾತನಾಡಿ ಹಿರಿಯರ ಸ್ಮರಣೆಯಲ್ಲಿ ಒಂದು ಕೋಣೆ ನಿರ್ಮಾಣಕ್ಕೆ ರೂ. 5 ಲಕ್ಷ ದೇಣಿಗೆ ನೀಡಿದರೆ ಅವರ ಹೆಸರು ಮತ್ತು ಭಾವ ಚಿತ್ರ ಹಾಕಲಾಗುವದು. ರೂ.25000 ಗಿಂತ ಹೆಚ್ಚಿಗೆ ದೇಣಿಗೆ ಕೊಡುವವರ ಹೆಸರನ್ನು ನಾಮ ಫಲಕದಲ್ಲಿ ಬರೆಸಲಾಗುವದು ಎಂದು ವಿವರಿಸಿದರು.

ಇದೇ ಸಂದರ್ಭದಲ್ಲಿ ಸಮಿತಿ ಸದಸ್ಯ ವ್ಹಿ.ಬಿ. ಕುಲಕರ್ಣಿ ತಮ್ಮ ತಂದೆ ಭಗವಂತರಾವ್ ಹೆಸರಿನಲ್ಲಿ ರೂ. 5 ಲಕ್ಷ ದೇಣಿಗೆ ಪ್ರಕಟಿಸಿದರು. ಸಮಿತಿ ಅಧ್ಯಕ್ಷ ಕಿರಣ ಚುಳಕಿ ಅವರೂ ತಮ್ಮ ತಂದೆ ಸ್ಮರಣೆಯಲ್ಲಿ ರೂ.5 ಲಕ್ಷ ಕೋಣೆ ನಿರ್ಮಾಣಕ್ಕೆ ದೇಣಿಗೆ ಕೊಡುವದಾಗಿ ಹೇಳಿದರು.

ಸದಸ್ಯರಾದ ಡಾ ಮಲಘಾಣ, ಅಶೋಕರಾವ್, ವಿಕಾಸ ಪದಕಿ ವ್ಹಿ ಸಿ ಕುಲಕರ್ಣಿ, ಮೋಹನ ಕೌತಾಳ, ಗೋವಿಂದ ಜೋಶಿ ವ್ಯವಸ್ಥಾಪಕ ಪಂಡಿತ ವಾಸುದೇವ ಆಚಾರ್ಯ, ಪಂಡಿತ ಸಮೀರಾಚಾರ್ಯ ಭಜನಾ ಮಂಡಳಿ ಪ್ರತಿನಿಧಿಗಳಾದ ಅನಿತಾ ಪದಕಿ ಮತ್ತು ಲಕ್ಷ್ಮಿ ಕುಲಕರ್ಣಿ. ಗುತ್ತಿಗೆದಾರ ಮೋಹನ ಕುಲಕರ್ಣಿ ಶ್ರೀವತ್ಸ ಕುಲಕರ್ಣಿ ಮುಂತಾದವರು ಉಪಸ್ಥಿತರಿದ್ದರು.

# ವಿಬಿಜಿ– ರಾಮ್–ಜಿ ಕಾಮಗಾರಿಗಳಿಗೆ ವೇಗದ ಸ್ಪರ್ಶ ನೀಡಿ




■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಬಿಜಿ– ರಾಮ್– ಜಿ ಯೋಜನೆಯಡಿ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿ ಕಾರ್ಮಿಕರನ್ನು ಕಾಮಗಾರಿಗಳಲ್ಲಿ ತೊಡಗಿಸಿಕೊಂಡು ಗರಿಷ್ಠ 200 ಕೂಲಿ ಕಾರ್ಮಿಕರಿಗೆ ಪ್ರತಿದಿನ ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿಗಳಾದ ಪ್ರಕಾಶ ವಡ್ಡರ ಅವರು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ಬಸವನಬಾಗೇವಾಡಿ ತಾಲೂಕಿನ ಉಕ್ಕಲಿ ಮತ್ತು ಇಂಗಳೇಶ್ವರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮೀಣ ಅರ್ಹ ಕುಟುಂಬಗಳಿಗೆ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿಸುವ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಶಾಶ್ವತ ಆಸ್ತಿಗಳನ್ನು ಸೃಜಿಸುವ ಉದ್ದೇಶದಿಂದ ಅನುಷ್ಠಾನಗೊಳ್ಳುತ್ತಿರುವ ವಿಕಸಿತ ಭಾರತ– ಗ್ಯಾರಂಟಿ ಫಾರ್ ರೋಜ್ಗಾರ್ ಅಂಡ್ ಆಜೀವಿಕ ಮಿಷನ್– ಗ್ರಾಮೀಣ (ವಿಬಿಜಿ– ರಾಮ್– ಜಿ) ಯೋಜನೆಯಡಿ ನಡೆಯುತ್ತಿರುವ ಕಾಮಗಾರಿಗಳಿಗೆ ಭೇಟಿ ನೀಡಿ ಅವರು ಮಾತನಾಡಿದರು.

ಈ ಯೋಜನೆಯಡಿ ಕಾರ್ಯನಿರ್ವಹಿಸುವ ಪ್ರತಿಯೊಬ್ಬ ಕೂಲಿ ಕಾರ್ಮಿಕರ ಹಾಜರಾತಿಯನ್ನು ಪ್ರತಿದಿನ ಎನ್‌ಎಂಎಂಎಸ್ ಆ್ಯಪ್ ಮೂಲಕ ಕಡ್ಡಾಯವಾಗಿ ದಾಖಲಿಸಬೇಕು ಹಾಗೂ ಹಾಜರಾತಿ ಮತ್ತು ಮಾನವ ದಿನಗಳ ಸೃಜನೆಗೆ ಸಂಬಂಧಿಸಿದಂತೆ ಯಾವುದೇ ಲೋಪವಾಗದಂತೆ ಗ್ರಾಮ ಪಂಚಾಯಿತಿ ಸಿಬ್ಬಂದಿ ಎಚ್ಚರಿಕೆ ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಗ್ರಾಮೀಣ ಕೂಲಿ ಕಾರ್ಮಿಕರಿಗೆ ಹೆಚ್ಚಿನ ಪ್ರಮಾಣದಲ್ಲಿ ಉದ್ಯೋಗಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿಗಳ ಕ್ರಿಯಾ ಯೋಜನೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿ ಆಧಾರಿತ ಕಾಮಗಾರಿಗಳನ್ನು ಸೇರ್ಪಡೆಗೊಳಿಸಬೇಕು. ಗ್ರಾಮಗಳ ಸ್ಥಳೀಯ ಅಗತ್ಯಗಳಿಗೆ ಅನುಗುಣವಾಗಿ ಕೆರೆ, ಜಲಸಂರಕ್ಷಣೆ, ಕೃಷಿ ಹೊಂಡ ಸೇರಿದಂತೆ ವೈಯಕ್ತಿಕ ಫಲಾನುಭವಿ ಆಧಾರಿತ ಕಾಮಗಾರಿಗಳನ್ನು ಗುರುತಿಸಿ ಅರ್ಹ ಕುಟುಂಬಗಳನ್ನು ಯೋಜನೆಯಡಿ ತೊಡಗಿಸಿಕೊಳ್ಳಬೇಕು ಎಂದು ಪಿಡಿಒಗಳಿಗೆ ಸೂಚಿಸಿದರು.

ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳಲ್ಲಿ ಜಾಬ್ ಕಾರ್ಡ್ ಮೇಳಗಳನ್ನು ಆಯೋಜಿಸಿ, ಅರ್ಹ ಕೂಲಿ ಕಾರ್ಮಿಕರಿಗೆ ಜಾಬ್ ಕಾರ್ಡ್ ಒದಗಿಸುವ ಮೂಲಕ ಹೆಚ್ಚಿನ ಸಂಖ್ಯೆಯ ಗ್ರಾಮೀಣ ಕುಟುಂಬಗಳನ್ನು ಯೋಜನೆಯ ವ್ಯಾಪ್ತಿಗೆ ತರಬೇಕು ಹಾಗೂ ಅವರಿಗೆ ಉದ್ಯೋಗ ಕಲ್ಪಿಸಬೇಕು ಎಂದು ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ ಅವರು ಸೂಚಿಸಿದರು.

ಈ ಸಂದರ್ಭದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ವೆಂಕಟೇಶ ವಂದಾಲ, ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಪ್ರಕಾಶ ದೇಸಾಯಿ, ತಾಂತ್ರಿಕ ಸಂಯೋಜಕ ವಿಶ್ವನಾಥ ಪಟ್ಟಣಶೆಟ್ಟಿ, ಐಇಸಿ ಸಂಯೋಜಕ ಮಡಿವಾಳಪ್ಪ ಬಿರಾದಾರ, ತಾಂತ್ರಿಕ ಸಹಾಯಕರಾದ ಚಂದ್ರಶೇಖರ ಆಡಿನ, ಉಕ್ಕಲಿ ಗ್ರಾಮ ಪಂಚಾಯಿತಿ ಪಿಡಿಒ ಮಲ್ಲಿಕಾರ್ಜುನ ಹಿಟ್ಟಿನಳ್ಳಿ, ಇಂಗಳೇಶ್ವರ ಗ್ರಾಮ ಪಂಚಾಯಿತಿ ಪಿಡಿಒ ಜಯಕುಮಾರ ದೇವರನಾವದಗಿ, ಕಾರ್ಯದರ್ಶಿಗಳು, ಗ್ರಾಮ ಪಂಚಾಯಿತಿ ಸಿಬ್ಬಂದಿ, ಕಾಯಕಬಂಧುಗಳು ಹಾಗೂ ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.

# ಭೀಮಾ ನದಿಯ ತಟದಲ್ಲಿ ಮಿಂದೆದ್ದ ಭಕ್ತ ಸಮೂಹ

## ಧೂಳಖೇಡದ ಶಂಕರಲಿಂಗ ದೇವಾಲಯದಲ್ಲಿ ವಿಶೇಷ ಪೂಜೆ | ಪಲ್ಲಕ್ಕಿ, ನಂದಿಧ್ವಜಕ್ಕೆ ಪವಿತ್ರ ಸ್ನಾನ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಇಂಡಿ ತಾಲೂಕಿನ ಬಳ್ಳೊಳ್ಳಿ ಗ್ರಾಮದ ಶ್ರೀ ವೀರಭದ್ರೇಶ್ವರ ದೇವರ ಪಲ್ಲಕ್ಕಿ ಪ್ರತಿ ವರ್ಷದಂತೆ ಈ ವರ್ಷವೂ ಶ್ರಾವಣ ಮಾಸದ ಭಾನುವಾರದಂದು ಬಳ್ಳೊಳ್ಳಿಯಿಂದ ಧೂಳಖೇಡ ಗ್ರಾಮದ ಶ್ರೀ ಶಂಕರಲಿಂಗ ದೇವಸ್ಥಾನಕ್ಕೆ ಭವ್ಯ ಮೆರವಣಿಗೆಯೊಂದಿಗೆ ಆಗಮಿಸಿತು.

ಭಕ್ತರು ಪಲ್ಲಕ್ಕಿ ಹಾಗೂ ನಂದಿಧ್ವಜದೊಂದಿಗೆ ದೇವಾಲಯಕ್ಕೆ ಆಗಮಿಸಿ, ಬಳ್ಳೊಳ್ಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ನೂರಾರು ಭಕ್ತರು ಭಾಗವಹಿಸಿ ರಾತ್ರಿ ಇಡೀ ಭಜನೆ, ಕೀರ್ತನೆ ಹಾಗೂ ಆರಾಧನಾ ಕಾರ್ಯಕ್ರಮಗಳನ್ನು ನಡೆಸಿದರು.

ಧಾರ್ಮಿಕ ಆಚರಣೆಗಳಿಂದ ಧೂಳಖೇಡದ ಶಂಕರಲಿಂಗ ದೇವಸ್ಥಾನದ ಆವರಣದಲ್ಲಿ ಭಕ್ತಿಮಯ ವಾತಾವರಣ ನಿರ್ಮಾಣವಾಗಿತ್ತು.

ಸೋಮವಾರ ಬೆಳಿಗ್ಗೆ ಭಕ್ತರು ಭೀಮಾ ನದಿ ತಟಕ್ಕೆ ತೆರಳಿ ಶ್ರೀ ವೀರಭದ್ರೇಶ್ವರ ದೇವರ ಪಲ್ಲಕ್ಕಿ, ನಂದಿಧ್ವಜ ಸೇರಿದಂತೆ ಪೂಜಾ ಸಾಮಗ್ರಿಗಳಿಗೆ ಪವಿತ್ರ ಸ್ನಾನ ಮಾಡಿಸಿದರು. ಬಳಿಕ ಬಳ್ಳೊಳ್ಳಿ ಸೇರಿದಂತೆ ವಿವಿಧೆಡೆಯಿಂದ ಆಗಮಿಸಿದ್ದ ನೂರಾರು ಭಕ್ತರು ಭೀಮಾ ನದಿಯಲ್ಲಿ ಪುಣ್ಯಸ್ನಾನ ಮಾಡಿ, ಶ್ರೀ ಶಂಕರಲಿಂಗ ದೇವರಿಗೆ ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ, ಹಿರಿಯರ ಕಾಲದಿಂದಲೂ ನಡೆದುಕೊಂಡು ಬಂದಿರುವ ಸಂಪ್ರದಾಯದಂತೆ ಶ್ರಾವಣ ಮಾಸದ ಮೊದಲ ಸೋಮವಾರ ಪವಿತ್ರ ಕ್ಷೇತ್ರಗಳಿಗೆ ತೆರಳಿ, ಅಲ್ಲಿನ ನದಿಗಳಲ್ಲಿ ಸ್ನಾನ ಮಾಡಿ ದೇವರ ದರ್ಶನ ಪಡೆಯುವುದು ನಮ್ಮ ಧಾರ್ಮಿಕ ಪರಂಪರೆಯಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಂಕರಲಿಂಗ ದೇವಸ್ಥಾನದ ಅರ್ಚಕ ಶ್ರೀಶೈಲ ಪೂಜಾರಿ, ಧೂಳಖೇಡದ ಶ್ರೀ ಶಂಕರಲಿಂಗ ದೇವಾಲಯವು ವಿಜಯಪುರ ಜಿಲ್ಲೆಯ ಚಡಚಣ ತಾಲೂಕಿನ ಭೀಮಾ ನದಿ ದಂಡೆಯ ಮೇಲಿರುವ ಪುರಾತನ ಹಾಗೂ ಧಾರ್ಮಿಕ ಮಹತ್ವದ ಕ್ಷೇತ್ರವಾಗಿದೆ. ಪ್ರಾಚೀನ ಶಾಸನಗಳಲ್ಲಿ ಈ ಕ್ಷೇತ್ರವನ್ನು 'ದಕ್ಷಿಣ ಕಾಶಿ' ಎಂದು ಉಲ್ಲೇಖಿಸಲಾಗಿದೆ ಎಂದು ತಿಳಿಸಿದರು.

ಈ ಕ್ಷೇತ್ರದಲ್ಲಿ ದಕ್ಷ ಬ್ರಹ್ಮನ ಯಜ್ಞಕುಂಡವಿದ್ದು, ಇದಕ್ಕೆ ವಿಶೇಷ ಮಹತ್ವವಿದೆ. ಇಲ್ಲಿನ ದೇವರಿಗೆ ವಿಭೂತಿ ಬದಲು ಯಜ್ಞಕುಂಡದ ಮಣ್ಣನ್ನು ಹಚ್ಚಿದರೆ ಅದು ವಿಭೂತಿಯ ರೂಪ ಪಡೆಯುತ್ತದೆ ಎಂಬ ನಂಬಿಕೆ ಭಕ್ತರಲ್ಲಿದೆ.

ಇಲ್ಲಿನ ಧಾರ್ಮಿಕ ಆಚರಣೆಗಳಲ್ಲಿ ಎಲೆ ಪೂಜೆ ಹಾಗೂ ಅಕ್ಕಿ ಪೂಜೆಗೆ ವಿಶೇಷ ಸ್ಥಾನವಿದೆ. ಭಕ್ತರ ಹರಕೆ ಹಾಗೂ ಸಂಪ್ರದಾಯದಂತೆ ಸುಮಾರು ಎರಡು ಕ್ವಿಂಟಲ್ ಅಕ್ಕಿಯಿಂದ ವಿಶೇಷ ಪೂಜೆ ನೆರವೇರಿಸಲಾಗುತ್ತದೆ ಎಂದು ಅವರು ವಿವರಿಸಿದರು.

ಈ ಸಂದರ್ಭದಲ್ಲಿ ವೀರಭದ್ರೇಶ್ವರ ದೇವಸ್ಥಾನದ ಪೂಜಾರಿ ಮೋನಪ್ಪ ಬಡಿಗೇರ, ಅಣ್ಣಪ್ಪ ಯಾರನಾಳ, ಈರಣ್ಣ ವಾಲಿ, ಸದಾಶಿವ ರೇವತಗಾಂವ, ಈರಣ್ಣ ತೋಟದಾರ, ವಿಠ್ಠಲ ಶಿರಷ್ಯಾಡ, ರಾಘು ಬಡಿಗೇರ ಸೇರಿದಂತೆ ವಿವಿಧ ಗ್ರಾಮದ ನೂರಾರು ಭಕ್ತರು ಉಪಸ್ಥಿತರಿದ್ದರು.

# ಸಚಿವ ಬಿ.ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ

## ವಿಜಯಪುರ ಜಿಲ್ಲೆಗೆ ಬರಗಾಲ ಘೋಷಣೆ, ರೈತರ ಕೃಷಿ ಸಾಲ ಮನ್ನಾ & ಮೇವು ಬ್ಯಾಂಕ್, ಗೋಶಾಲೆ ತೆರೆಯಲು ಮುಖಂಡರ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಸಚಿವ ಬಿ.ನಾಗೇಂದ್ರ ರಾಜೀನಾಮೆ ಹಾಗೂ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಜಿಲ್ಲಾ ಬಿಜೆಪಿ ನಗರದಲ್ಲಿಂದು ಮಂಗಳವಾರ ಬೃಹತ್ ಪ್ರತಿಭಟನೆ ನಡೆಸಿತು.

ಬೆಳಗ್ಗೆ ನಗರದ ಡಾ.ಅಂಬೇಡ್ಕರ ಸರ್ಕಲ್ ಬಳಿ ಆರಂಭವಾದ ಹೋರಾಟದಲ್ಲಿ ಜಿಲ್ಲೆಯ ವಿವಿಧೆಡೆಯಿಂದ ನೂರಾರು ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ಭ್ರಷ್ಟ ಸಚಿವನ ರಾಜೀನಾಮೆಯನ್ನು ಕಾಂಗ್ರೆಸ್ ಪಡೆಯಲೇಬೇಕು, ಇಲ್ಲವಾದಲ್ಲಿ ನಿರಂತರವಾಗಿ ಹೋರಾಟ ನಡೆಸಲಾಗುವುದು ಎಂದು ಮುಖಂಡರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಸದ ರಮೇಶ ಜಿಗಜಿಣಗಿ ಮಾತನಾಡಿ, ಸಿದ್ದರಾಮಯ್ಯ ಸಿಎಂ ಆಗಿದ್ದಾಗ ನಾಗೇಂದ್ರ ಅವರು 175 ಕೋಟಿ ರೂ. ಅವ್ಯವಹಾರ ಎಸಗಿದ್ದು ನಿಜ ಎಂದು ಒಪ್ಪಿಕೊಂಡು, ಈಗ ಮತ್ತೆ ನಾಗೇಂದ್ರಗೆ ಸಚಿವ ಸ್ಥಾನ ಕೊಟ್ಟಿರುವುದು ನಾಚಿಕೆಗೇಡಿನ ಸಂಗತಿ ಎಂದು ವಾಗ್ದಾಳಿ ನಡೆಸಿದರು.

ಕಾಂಗ್ರೆಸ್‌ನವರು ಎಸ್‌ಸಿ/ಎಸ್‌ಟಿ/ ಅಲ್ಪಸಂಖ್ಯಾತರ ಪರ ಎಂದು ಹೇಳಿಕೊಂಡು ಈ ಸಮುದಾಯದ ಅನುದಾನವನ್ನು ದುರ್ಬಳಕೆ ಮಾಡಲಾಗಿದೆ. ವಾಲ್ಮೀಕಿ ನಿಗಮದ ಅನುದಾನವನ್ನು ದುರ್ಬಳಕೆ ಮಾಡಿದ ವ್ಯಕ್ತಿಗೆ ಮಂತ್ರಿಸ್ಥಾನ ಕೊಟ್ಟಿರುವುದು ಸರಿಯೇ ಎಂದು ಪ್ರಶ್ನಿಸಿದ ಜಿಗಜಿಣಗಿ ಅವರು, ನಾಗೇಂದ್ರ ಅವರ ರಾಜೀನಾಮೆ ಪಡೆಯುವ ತನಕ ನಮ್ಮ ಹೋರಾಟ ಮುಂದುವರಿಯುತ್ತದೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ ಮಾತನಾಡಿ, ಭ್ರಷ್ಟಾಚಾರ ಮಾಡಿದ ಶಾಸಕ ಬಿ.ನಾಗೇಂದ್ರ ಅವರನ್ನು ಮಂತ್ರಿಮಂಡಲದಲ್ಲಿ ಸೇರಿಸಿಕೊಂಡಿದ್ದು ಖಂಡನೀಯವಾಗಿದೆ. ವಾಲ್ಮೀಕಿ ನಿಗಮವನ್ನೇ ಲೂಟಿ ಮಾಡಿದ ಸಚಿವ ಬಿ.ನಾಗೇಂದ್ರ ರಾಜೀನಾಮೆ ಕೊಡಬೇಕು. ವಿಜಯಪುರ ಜಿಲ್ಲೆಯನ್ನು ಬರಗಾಲ ಎಂದು ಘೋಷಣೆ ಮಾಡಬೇಕು. ರೈತರ ಕೃಷಿ ಸಾಲ ಮನ್ನಾ ಮಾಡಬೇಕು. ಜಿಲ್ಲೆಯಾದ್ಯಂತ ಮೇವು ಬ್ಯಾಂಕ್ ಹಾಗೂ ಗೋಶಾಲೆ ತೆರೆಯಬೇಕು ಎಂದು ಒತ್ತಾಯಿಸಿದರು.

ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಮಾತನಾಡಿ, ಕಾಂಗ್ರೆಸ್ ಸರ್ಕಾರದ ಚರ್ಮ ದಪ್ಪವಾಗಿದ್ದು, ಈ ಸರ್ಕಾರವನ್ನೇ ವಿಸರ್ಜಿಸಬೇಕಿದೆ. ಗ್ಯಾರಂಟಿ ಹೆಸರಿನಲ್ಲಿ ಜನರನ್ನು ಮೋಸಗೊಳಿಸಲಾಗುತ್ತಿದೆ. ಸಾರಿಗೆ ವ್ಯವಸ್ಥೆಯಲ್ಲಿ ಬಸ್ಸುಗಳಿಲ್ಲ, ಮಾಶಾಸನ ಬಂದಿಲ್ಲ, ಬೆಳೆ ವಿಮೆಗಳು ಬರುತ್ತಿಲ್ಲ. ಕಳಪೆ ರಸ್ತೆಗಳನ್ನು ನಿರ್ಮಿಸಲಾಗುತ್ತಿದೆ ಎಂದು ಆರೋಪಿಸಿದರು.


ಮುಖಂಡ ಕಾಸುಗೌಡ ಬಿರಾದಾರ ಮಾತನಾಡಿದರು.

ಜಿಲ್ಲಾಧ್ಯಕ್ಷ ಗುರಲಿಂಗಪ್ಪ ಅಂಗಡಿ, ಎಸ್.ಕೆ.ಬೆಳ್ಳುಬ್ಬಿ, ಮಾಜಿ ಶಾಸಕ ಅರುಣ ಶಹಾಪುರ, ವಿಜಯಕುಮಾರ ಪಾಟೀಲ, ರಮೇಶ ಭೂಸನೂರ, ಸಂಜೀವ ಐಹೊಳ್ಳಿ, ಕಾಸುಗೌಡ ಬಿರಾದಾರ, ಉಮೇಶ ಕಾರಜೋಳ, ವಿವೇಕಾನಂದ ಡಬ್ಬಿ, ಗೋಪಾಲ ಘಟಕಾಂಬಳೆ, ಚಂದ್ರಶೇಖರ ಕವಟಗಿ, ಉಮೇಶ ಕೋಳಕೂರ, ಮಳುಗೌಡ ಪಾಟೀಲ, ಎಸ್.ಎ.ಪಾಟೀಲ, ಹಣಮಂತರಾಯಗೌಡ ಪಾಟೀಲ, ಮಲ್ಲಿಕಾರ್ಜುನ ಕಿವುಡೆ, ರಾಘವೇಂದ್ರ ಕಾಪ್ಸೆ, ಅನೀಲ ಜಮಾದಾರ, ಶೀಲವಂತ ಉಮರಾಣಿ, ರವಿ ವಗ್ಗೆ, ಈರಣಗೌಡ ಪಾಟೀಲ, ನಾಗೇಶ ಸರ್ವಜ್ಞ, ನಾಗು ಹುನ್ನೂರ, ಭೀಮಾಶಂಕರ ಆಳೂರ, ಚೆಲುವರಾಜ ತೇಲಿ, ಚನ್ನಯ್ಯ ಸ್ವಾಮಿ, ಬಸಮ್ಮ ಮರಡಿ, ಶ್ರೀದೇವಿ ಕುಲಕರ್ಣಿ, ಅನ್ನಪ್ಪ ಖೈನೂರ (ಹೊರ್ತಿ), ಸ್ವಪ್ನಾ ಕನಮುಚನಾಳ, ಚಿದಾನಂದ ಚಲವಾದಿ, ರಾಜಕುಮಾರ ಸಗಾಯಿ, ಭೀಮಾಶಂಕರ ಹದನೂರು, ಕೃಷ್ಣಾ ಗುನ್ಹಾಳಕರ, ರಾಜೇಶ ತವಸೆ, ವಿಜಯ ಜೋಷಿ, ಕಾಂತು ಶಿಂಧೆ, ಮಂಜುನಾಥ ಮೀಸೆ, ಸಚೀನ ಬೊಂಬಳೆ, ಭರತ ಕೋಳಿ, ರಜನಿ ಸಂಬಣ್ಣಿ, ಭಾರತಿ ಭುಯ್ಯಾರ, ಪ್ರಭುಗೌಡ ಅಸ್ಕಿ, ಬಸವರಾಜ ಬೈಚಬಾಳ, ಸೇರಿದಂತೆ ಪಕ್ಷದ ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

# ಶಾಸಕ ನಾಡಗೌಡರ ಹೇಳಿಕೆ ಅನಗತ್ಯ : ಸಂಗೀತಾ ದಿನ್ನಿ

## ವಿಜಯಪುರದಲ್ಲಿ ಹಾಲುಮತ ಸಮಾಜದ ಮುಖಂಡರಿಂದ ಸುದ್ದಿಗೋಷ್ಠಿ | ಸಚಿವ ಎಂ.ಬಿ.ಪಾಟೀಲರ ರಾಜಕೀಯ ಸಹಾಯದ ಸ್ಮರಣೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಮುದ್ದೇಬಿಹಾಳ ಶಾಸಕ ಸಿ.ಎಸ್. ನಾಡಗೌಡ ಅವರಿಗೆ ಸಚಿವ ಸ್ಥಾನ ಸಿಗದಿರುವುದಕ್ಕೆ ಅಸಮಾಧಾನಗೊಂಡು ಹಾಲುಮತ ಸಮಾಜವನ್ನು ರಾಜಕೀಯಕ್ಕೆ ಎಳೆದು ತಂದಿರುವುದನ್ನು ತೀವ್ರವಾಗಿ ಖಂಡಿಸುತ್ತೇನೆ ಎಂದು ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಸಂಗೀತಾ ದಿನ್ನಿ ಹೇಳಿದರು.

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಧರ್ಮಸಿಂಗ ಅವರು ಮುಖ್ಯಮಂತ್ರಿಗಳಾಗಿದ್ದಾಗ ವಿಜಯಪುರ ಜಿಲ್ಲಾ ಪಂಚಾಯತ್ ಅಧ್ಯಕ್ಷ ಸ್ಥಾನಕ್ಕೆರಿಸಲು ಎಂ.ಬಿ.ಪಾಟೀಲರು ಮತ್ತು ಶಿವಾನಂದ ಪಾಟೀಲರು ಚರ್ಚಿಸಿ ಹಾಲುಮತ ಸಮಾಜದ ಮಹಿಳೆಗೆ ಅಧ್ಯಕ್ಷ ಸ್ಥಾನಕ್ಕೆ ಕೂರಿಸಲು ನಿರ್ಧರಿಸಿದ್ದರು.

ಅದೇ ರೀತಿ ಅಂದು ನನ್ನನ್ನು ಪ್ರಥಮ ಹಾಲುಮತದ ಮಹಿಳಾ ಅಭ್ಯರ್ಥಿಯನ್ನಾಗಿ ಅವಕಾಶವನ್ನು ಕಲ್ಪಿಸಿದ್ದರು. ಆದರೆ, ಈ ಕುರಿತು ಹಾಲುಮತ ಸಮಾಜದ ಬಗ್ಗೆ ನಾಡಗೌಡರ ಹೇಳಿಕೆ ಅನಗತ್ಯವಾಗಿತ್ತು ಎಂದು ಹೇಳಿದರು.

ಅಲ್ಲದೇ, ಅವರದೇ ಕ್ಷೇತ್ರದ ಮತ್ತು ನಾಡಗೌಡರನ್ನು ಬೆಂಬಲಿಸಿದ್ದ ಮುದ್ದೇಬಿಹಾಳದ ಕೆಂಚಪ್ಪ ಬಿರಾದಾರ, ತಿಕೋಟಾದ ತಮ್ಮಣ್ಣ ಹಂಗರಗಿ, ಸಿಂದಗಿಯ ಮಲ್ಲಣ್ಣ ಸಾಲಿ ಅವರನ್ನು ಜಿಪಂ ಉಪಾಧ್ಯಕ್ಷರನ್ನಾಗಿ ಮಾಡಲು ಎಂ.ಬಿ.ಪಾಟೀಲರ ಪಾತ್ರ ಇದೆ ಎಂದರು.

ಅಹಿಂದ ಮುಖಂಡ ಸೋಮನಾಥ ಕಳ್ಳಿಮನಿ ಮಾತನಾಡಿ, ವಿಜಯಪುರ ಜಿಲ್ಲಾ ಪಂಚಾಯಿತಿ ಅಧ್ಯಕ್ಷ ಸ್ಥಾನಕ್ಕೆ ಹಾಲುಮತದ ನೀಲಮ್ಮ ಮೇಟಿ ಮತ್ತು ನನ್ನ ಪತ್ನಿ ಸುಜಾತಾ ಕಳ್ಳಿಮನಿ ಅವರನ್ನು ಅಧ್ಯಕ್ಷ ಸ್ಥಾನಕ್ಕೇರಿಸುವ ಸಂದರ್ಭದಲ್ಲಿ ಬಹುಮತವಿರಲಿಲ್ಲ. ಇದನ್ನು ಸವಾಲಾಗಿ ಸ್ವೀಕರಿಸಿದ ಎಂ.ಬಿ. ಪಾಟೀಲರು ತನು, ಮನ, ಧನದಿಂದ ಬೆಂಬಲಿಸಿ ಅಧ್ಯಕ್ಷ ಸ್ಥಾನವನ್ನು ಕೊಡಿಸಿದ್ದಾರೆ ಎಂದರು.

ಸಿ.ಎಸ್.ನಾಡಗೌಡ ಅವರು ಹಾಲುಮತದವರನ್ನು ಅಧ್ಯಕ್ಷ ಸ್ಥಾನದಲ್ಲಿ ಕೂರಿಸಲು ಸರ್ಕಸ್ ಮಾಡಬೇಕಾಯಿತು.

ಇದಕ್ಕೆ ಎಂ. ಬಿ. ಪಾಟೀಲರೇ ಕಾರಣ ಎಂದಿರುವುದು ಸರಿಯಲ್ಲ. ನನ್ನ ಪತ್ನಿ ಸುಜಾತ ಕಳ್ಳಿಮನಿ ಆಗಲಿ, ನೀಲಮ್ಮ ಮೇಟಿ, ಸಂಗೀತಾ ದಿನ್ನಿಯವರಾಗಲಿ ಈ ಮೂವರು ಹಾಲುಮತದ ಮಹಿಳೆಯರು ಜಿಲ್ಲಾ ಪಂಚಾಯತ್ ಅಧ್ಯಕ್ಷಗಿರಿಗೆರಲು ಎಂ.ಬಿ.ಪಾಟೀಲರು ಕಾರಣರಾಗಿದ್ದಾರೆ ಎಂದರು.

ಸಿ. ಎಸ್. ನಾಡಗೌಡರು ಯಾರನ್ನು ಗಮನದಲ್ಲಿಟ್ಟುಕೊಂಡು ಹೇಳಿದ್ದಾರೆ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದರು.

### ಹಾಲುಮತ ಸಮಾಜಕ್ಕೆ ವಿಧಾನಸಭೆ ಟಿಕೆಟ್ ಬೇಡಿಕೆ

**ಗೋವಾ ಕನ್ನಡಿಗರ ಸಂಘದ ಅಧ್ಯಕ್ಷ ಸಿದ್ದಣ್ಣ ಮೇಟಿ ಮಾತನಾಡಿ, ಮುದ್ದೇಬಿಹಾಳ ಮತ್ತು ದೇವರಹಿಪ್ಪರಗಿ ತಾಲೂಕುಗಳಲ್ಲಿ ಹಾಲುಮತ ಸಮಾಜದ ಜನಸಂಖ್ಯೆ ಹೆಚ್ಚಿದೆ. ಮುಂದಿನ ದಿನಗಳಲ್ಲಿ ನಮ್ಮ ಸಮುದಾಯಕ್ಕೆ ವಿಧಾನಸಭೆಗೆ ಟಿಕೆಟ್ ನೀಡಬೇಕೆಂದು ಎಲ್ಲರೂ ಸೇರಿ ಒತ್ತಾಯಿಸುತ್ತೇವೆ ಎಂದರು.**

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR